ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೦೫

# ಪಟ್ಟಿ – ೧೦

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ

(ಮುಂದುವರೆದ ಉಪವೇಶನ)

ಬುಧವಾರ, ದಿನಾಂಕ : ೧೦ನೇ ಮಾರ್ಚ್, ೨೦೨೧

---

## ಸಮೂಹ – III

೧. ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು.

೨. ಕಂದಾಯ ಸಚಿವರು.

೩. ವಸತಿ ಸಚಿವರು.

೪. ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೬. ಸಮಾಜ ಕಲ್ಯಾಣ ಸಚಿವರು.

೭. ಪಶುಸಂಗೋಪನೆ ಸಚಿವರು.

---

# ಬೀದರ್ ಜಿಲ್ಲೆಯಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರಿಗೆ ನಿವೇಶನದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೧ (೧೦೫೫) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಔರಾದ ತಾಲ್ಲೂಕಿನ ಸರ್ವೆ ಸಂಖ್ಯೆ ೧೮೩ ಹಾಗೂ ಬೀದರ್ ತಾಲ್ಲೂಕಿನ ಸರ್ವೆ ಸಂಖ್ಯೆ: ೨೭–೨೮ರಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿಗಳಿಗೆ ನಿವೇಶನ ಒದಗಿಸಲು ತಲಾ ೨ ಎಕರೆ ಜಮೀನನ್ನು ಒದಗಿಸಲಾಗಿದ್ದು ಆ ಜಮೀನನ್ನು ಫಲಾನುಭವಿಗಳಿಗೆ ಹಂಚಲಾಗಿದೆಯೇ; ಹಂಚಿದ್ದಲ್ಲಿ, ತಾಲ್ಲೂಕುವಾರು ಫಲಾನುಭವಿಗಳ ವಿವರ ನೀಡುವುದು; ಹಂಚಿಕೆ ಯಾಗದಿದ್ದಲ್ಲಿ ಕಾರಣವೇನು;

(ಆ) ಜಿಲ್ಲೆಯಲ್ಲಿ ೨೦೧೭–೧೮ ರಿಂದ ೨೦೧೯–೨೦೨೦ರಲ್ಲಿ ೧೦೨ ಹಾಗೂ ೫೧೫ ವಸತಿಗಳನ್ನು ಮಂಜೂರು ಮಾಡಲಾಗಿದ್ದು, ಅವುಗಳನ್ನು ಹಂಚಿಕೆ ಮಾಡಲಾಗಿದೆಯೇ; ಮಾಡಿದ್ದಲ್ಲಿ, ಫಲಾನುಭವಿಗಳ ವಿವರ ನೀಡುವುದು ಹಾಗೂ ಹಂಚಿಕೆ ಮಾಡಲಾದ ನಿಯಮಗಳೇನು ;

(ಇ) ೨೦೧೭–೧೮ನೇ ಸಾಲಿನಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ಯೋಜನೆಯಡಿಯಲ್ಲಿ ಸಮುದಾಯದ ಕಾಲೋನಿಯಲ್ಲಿ ಮೂಲಭೂತ ಸೌಕರ್ಯ ಕಾಮಗಾರಿಗಳು ಆಗಿರುವುದು ಎಷ್ಟು; ಹಾಗೂ ಅದಕ್ಕೆ ಮೀಸಲಿಟ್ಟ ಅನುದಾನ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗದವರಿಗೆ ೨೦೧೮ರಿಂದ ೨೦೨೦–೨೧ನೇ ಸಾಲಿನಲ್ಲಿ ಮೀಸಲಿಟ್ಟ ಅನುದಾನ ಎಷ್ಟು; ಅದರಲ್ಲಿ ಮೂಲಭೂತ ಸೌಕರ್ಯಕ್ಕೆ ವಸತಿಗಾಗಿ

(ಮನೆಗಳಿಗಾಗಿ) ಸ್ವಯಂ ಉದ್ಯೋಗಕ್ಕಾಗಿ, ಸಾಲ ಸೌಲಭ್ಯಕ್ಕಾಗಿ ಹಾಗೂ ಸಮಾಜದ ಉನ್ನತ ಅಭಿವೃದ್ಧಿಗಾಗಿ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ?

## ಬೀದರ್ ಜಿಲ್ಲೆಯಲ್ಲಿ ಮೀನುಗಾರಿಕೆ ಇಲಾಖೆಯಿಂದ ಮೀನು ಸಾಕಾಣಿಕೆಗಾಗಿ ಸರ್ಕಾರದಿಂದ ಇರುವ ಯೋಜನೆಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೨ (೧೦೫೯) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೯–೨೦ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಮೀನುಗಾರಿಕೆ ಇಲಾಖೆಯಿಂದ ಮೀನು ಮರಿಗಳನ್ನು ಕೆರೆಗಳಲ್ಲಿ ಸಾಕಾಣೆ ಮಾಡಲು ಅನುಸರಿಸುವ ಕ್ರಮಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯಲ್ಲಿ ಕೆರೆಗಳಲ್ಲಿ/ಡ್ಯಾಂ/ಕಟ್ಟೆಗಳಲ್ಲಿ ಮೀನು ಸಾಕಾಣಿಕೆಗಾಗಿ ನೀಡಿರುವ ಅನುದಾನ ಎಷ್ಟು ? (ವರ್ಷವಾರು ಹಾಗೂ ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ದೇವಸ್ಥಾನಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೩ (೧೦೫೭) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಕಳೆದ ೫ ವರ್ಷಗಳಲ್ಲಿ ಮುಜರಾಯಿ ಇಲಾಖೆಗೆ ಬರುವಂತಹ ದೇವಸ್ಥಾನಗಳೆಷ್ಟು;

(ಆ) ಈ ದೇವಸ್ಥಾನಗಳ ಅಭಿವೃದ್ಧಿ ಹಾಗೂ ಭಕ್ತಾಧಿಗಳ ಸೌಲಭ್ಯಕ್ಕಾಗಿ ಘೋಷಣೆಯಾದ ಸೌಲಭ್ಯಗಳು ಯಾವುವು;

(ಇ) ಇವುಗಳಲ್ಲಿ ಮಂಜೂರಾದ ಸೌಲಭ್ಯಗಳು ಯಾವುವು; ಈ ಸೌಲಭ್ಯಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; ಹಾಗೂ ಬಳಕೆಯಾಗಿರುವ ಅನುದಾನ ಎಷ್ಟು ? (ದೇವಸ್ಥಾನಗಳಿಂದ ಬಂದ ಹಣವನ್ನು ವಿನಿಯೋಗಿಸಿರುವ ಬಗ್ಗೆ ಸಂಪೂರ್ಣವಾದ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಕೊಳಚೆ ಪ್ರದೇಶಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೪ (೧೦೫೮) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಕೊಳಚೆ ಪ್ರದೇಶಗಳನ್ನು ಗುರುತಿಸಲಾಗಿದೆ;

(ಆ) ಸದರಿ ಕೊಳಚೆ ಪ್ರದೇಶಗಳಲ್ಲಿ ವಾಸಿಸುತ್ತಿರುವ ವಸತಿ ರಹಿತರಿಗೆ ಎಷ್ಟು ಮನೆಗಳನ್ನು ನಿರ್ಮಿಸಿಕೊಡಲಾಗಿದೆ; ಅದರ ಕ್ಷೇತ್ರ ಎಷ್ಟು; (ವಿಸ್ತೀರ್ಣ, ಫಲಾನುಭವಿಗಳವಾರು ಸಂಪೂರ್ಣವಾದ ಮಾಹಿತಿಯನ್ನು ತಾಲ್ಲೂಕುವಾರು ವಿವರ ನೀಡುವುದು)

(ಇ) ಮನೆಗಳನ್ನು ನಿರ್ಮಿಸಲು ಇಲ್ಲಿಯವರೆಗೆ ಎಷ್ಟು ಅನುದಾನ ಮಂಜೂರು ಮಾಡಲಾಗಿದೆ; ಬಾಕಿ ಉಳಿದಿರುವುದೆಷ್ಟು ?

## ಬೀದರ್ ಜಿಲ್ಲೆಯ ವಸತಿ ನಿಲಯಗಳಿಗೆ ಕಂಪ್ಯೂಟರ್ ಲ್ಯಾಬ್‌ಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪೫ (೧೦೫೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ವಸತಿ ನಿಲಯಗಳ ಕಂಪ್ಯೂಟರ್ ಲ್ಯಾಬ್‌ಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಎಷ್ಟು ವಸತಿ ನಿಲಯಗಳಲ್ಲಿ ಕಂಪ್ಯೂಟರ್ ಲ್ಯಾಬ್‌ಗಳನ್ನು ನಿರ್ಮಿಸಲಾಗಿದೆ; ನಿರ್ಮಿಸಿದ್ದಲ್ಲಿ ವಿವರವಾದ ಮಾಹಿತಿ ಒದಗಿಸುವುದು;

(ಇ) ಜಿಲ್ಲೆಯಲ್ಲಿ ಎಷ್ಟು ಲ್ಯಾಬ್‌ಗಳು ಕಾರ್ಯ ನಿರ್ವಹಿಸುತ್ತಿವೆ; ಎಷ್ಟು ಲ್ಯಾಬ್‌ಗಳು ಕಾರ್ಯ ನಿರ್ವಹಿಸುತ್ತಿಲ್ಲ;

(ಈ) ಬೀದರ್ ಜಿಲ್ಲೆಯಲ್ಲಿ ಕಂಪ್ಯೂಟರ್ ಲ್ಯಾಬ್ ಶಿಕ್ಷಕರ ನೇಮಕಾತಿಯನ್ನು ಮಾಡಲಾಗಿದೆಯೇ; ಮಾಡಿದ್ದಲ್ಲಿ, ಅದರ ಸಂಖ್ಯೆ ಎಷ್ಟು ? (ನೇಮಕಾತಿ ನಿಯಮಗಳ ವಿವರ ನೀಡುವುದು)

## ಕ್ರೈಸ್ ನಿರ್ದೇಶನಾಲಯ ಮಾಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೭೪೬ (೯೮೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯ ಮಾಡುವ ಬಗೆಗಿನ ಬೇಡಿಕೆ ಪತ್ರಗಳು, ಶಿಫಾರಸ್ಸು ಪತ್ರಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; ನಿರ್ದೇಶನಾಲಯ ಮಾಡುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ; ಪ್ರಾರಂಭವಾಗಿದ್ದಲ್ಲಿ, ಪ್ರಕ್ರಿಯೆ ಯಾವ ಹಂತದಲ್ಲಿದೆ; ಇಲ್ಲದಿದ್ದಲ್ಲಿ ಯಾವಾಗ ಪ್ರಕ್ರಿಯೆ ಪ್ರಾರಂಭ ಮಾಡಲಾಗುವುದು;

(ಇ) ನಿರ್ದೇಶನಾಲಯ ಮಾಡಲು ಅಡೆತಡೆಗಳೇನಾದರೂ ಇವೆಯೇ; ಇದ್ದಲ್ಲಿ, ಇದರ ಸಮಸ್ಯೆಗೆ ಪರಿಹಾರ ಏನು;

(ಈ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವನ್ನು ಕರ್ನಾಟಕ ವಸತಿ ಶಿಕ್ಷಣ ನಿರ್ದೇಶನಾಲಯ ಮಾಡಿ ಎಲ್ಲಾ ವಸತಿ ಶಾಲೆಗಳನ್ನು ನಿರ್ದೇಶನಾಲಯದಡಿ ತಂದು ಅಭಿವೃದ್ಧಿಪಡಿಸಿದ್ದಲ್ಲಿ, ವಿದ್ಯಾರ್ಥಿಗಳಿಗೆ ಹಾಗೂ ನೌಕರರಿಗೆ ಅನುಕೂಲವಾಗಲಿದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ನಿಟ್ಟಿನಲ್ಲಿ ತೆಗೆದುಕೊಂಡ ಕ್ರಮಗಳೇನು ?

## ಕ್ರೈಸ್ ಪದವಿ ಪೂರ್ವ ಕಾಲೇಜುಗಳಲ್ಲಿನ ಖಾಯಂ ಉಪನ್ಯಾಸಕರ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೭೪೭ (೯೮೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕ್ರೈಸ್‌ನ ಪದವಿಪೂರ್ವ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಆ) ವಸತಿ ಶಾಲೆಗಳಲ್ಲಿನ ಸಹ ಶಿಕ್ಷಕರುಗಳಿಗೆ ವಸತಿ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳಿಗೆ ಬಡ್ತಿ ನೀಡಲು ಕೈಗೊಂಡ ಕ್ರಮಗಳೇನು; ವಸತಿ ಶಾಲೆಗಳ ಸಹ ಶಿಕ್ಷಕರುಗಳ ವಿಷಯವಾರು ಜ್ಯೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲಾಗಿದೆಯೇ; ಯಾವ ಕಾಲಮಿತಿಯಲ್ಲಿ ಬಡ್ತಿ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು;

(ಇ) ವಸತಿ ಶಾಲೆ ಶಿಕ್ಷಕರಿಗೆ/ನೌಕರರಿಗೆ ಪ್ರಸ್ತುತ ವರ್ಷ ವರ್ಗಾವಣೆ ಅಧಿನಿಯಮದಂತೆ ಕೌನ್ಸಿಲಿಂಗ್ ಮೂಲಕ ಸಾಮಾನ್ಯ ವರ್ಗಾವಣೆ ನೀಡಲು ತೆಗೆದುಕೊಂಡ ಕ್ರಮಗಳೇನು; ಪ್ರಸ್ತುತ ವರ್ಷ ವರ್ಗಾವಣೆ

ನೀಡಿದ್ದಲ್ಲಿ, ಕಾರಣವೇನು; ವಸತಿ ಶಾಲೆಗಳಲ್ಲಿ ೨೦೧೨ ರಿಂದ ನವೆಂಬರ್ ೨೦೨೦ ರವರೆಗೂ ಸೇವೆಯಲ್ಲಿರುವಾಗಲೇ ಮೃತಪಟ್ಟಿರುವ ಖಾಯಂ ನೌಕರರೆಷ್ಟು; ಮೃತಪಟ್ಟ ನೌಕರರ ಕುಟುಂಬಕ್ಕೆ ಸಿಗುವ ಪರಿಹಾರವೆಷ್ಟು; ಅವರಲ್ಲಿ ಎಷ್ಟು ಮೃತ ನೌಕರರ ಅವಲಂಭಿತರಿಗೆ ಅನುಕಂಪದ ಆಧಾರದ ಮೇಲೆ ನೌಕರಿಯನ್ನು ನೀಡಲಾಗಿದೆ; ನೀಡದಿದ್ದಲ್ಲಿ, ಕಾರಣವೇನು?

## ಲೋಕೋಪಯೋಗಿ ಇಲಾಖೆಯ ವತಿಯಿಂದ ನಾಗಮಂಗಲ ತಾಲ್ಲೂಕಿನ ರಾಜ್ಯ ಹೆದ್ದಾರಿ ರಸ್ತೆಯ ಅಭಿವೃದ್ಧಿಪಡಿಸುವ ಕಾಮಗಾರಿಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೪೮ (೧೦೪೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೮-೧೯ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಲೆಕ್ಕ ಶೀರ್ಷಿಕೆ: ೫೦೫೪-೦೪-೩೩೭-೦-೦೧-೧೫೪ ರಡಿ ನಾಗಮಂಗಲ ತಾಲ್ಲೂಕಿನ ಕಾಂತಾಪುರ ಮಾರ್ಗ ರಾಜ್ಯ ಹೆದ್ದಾರಿ ೧೯ (ಎನ್.ಹೆಚ್-೧೫೦ಎ) ಅನ್ನು ಹೊಣಕೆರೆ ಬಳಿ ಸೇರುವ ಜಿಲ್ಲಾ ಮುಖ್ಯ ರಸ್ತೆ ಮತ್ತು ನಾಗಮಂಗಲ ತಾಲ್ಲೂಕು ದೇವಲಾಪುರ ಮಾರ್ಕೋನಹಳ್ಳಿ ಸೇರುವ ಜಿಲ್ಲಾ ಮುಖ್ಯ ರಸ್ತೆಯ ರಾಜ್ಯ ಹೆದ್ದಾರಿ ಅಭಿವೃದ್ಧಿಪಡಿಸುವ ಕಾಮಗಾರಿಯು ರೂ. ೭೫೦.೦೦ ಲಕ್ಷಗಳಿಗೆ ಮಂಜೂರಾಗಿದ್ದು ಪ್ರಸ್ತುತ, ಕಾಮಗಾರಿ ಪೂರ್ಣಗೊಳಿಸಬೇಕಾದ ಸಮಯ ಮುಗಿದರೂ ಇನ್ನೂ ಕಾಮಗಾರಿ ಪೂರ್ಣಗೊಳ್ಳದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಕಾಮಗಾರಿ ಕಳಪೆ ಗುಣಮಟ್ಟದಿಂದ ಕೂಡಿದ್ದು, ಅಂದಾಜು ಪಟ್ಟಿಯಲ್ಲಿರುವಂತೆ ಕಾಮಗಾರಿ ಪೂರೈಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಗುಣಮಟ್ಟ ಪರಿಶೀಲಿಸಲು ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಕಾಮಗಾರಿ ವಿಳಂಬದಿಂದ ಸುತ್ತಮುತ್ತಲಿನ ಸಾರ್ವಜನಿಕರಿಗೆ ದಿನನಿತ್ಯ ತಾಲ್ಲೂಕು ಕೇಂದ್ರಕ್ಕೆ ಓಡಾಡಲು ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತುರ್ತು ಕಾಮಗಾರಿಯನ್ನು ಗುಣಮಟ್ಟದಿಂದ ಯಾವಾಗ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು)

(ಈ) ಈ ಸಂಬಂಧ, ಸಂಬಂಧಪಟ್ಟ ಗುತ್ತಿಗೆದಾರರು ಮತ್ತು ಇಲಾಖಾ ಅಧಿಕಾರಿಗಳ ವಿರುದ್ಧ ಕೈಗೊಳ್ಳಲಾದ ಶಿಸ್ತು ಕ್ರಮವೇನು ? (ವಿವರ ನೀಡುವುದು)

## ಕಂದಾಯ ಗ್ರಾಮಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೪೯ (೧೦೩೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಹೊಸ ಕಂದಾಯ ಗ್ರಾಮಗಳೆಂದು ಘೋಷಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಹೊಸದಾಗಿ ಕಂದಾಯ ಗ್ರಾಮಗಳೆಂದು ಘೋಷಿಸಿರುವ ಗ್ರಾಮಗಳಲ್ಲಿ ಇಲ್ಲಿಯವರೆಗೆ ನಿವೇಶನ ಸಂಬಂಧ ಎಷ್ಟು ಹಕ್ಕುಪತ್ರಗಳನ್ನು ನೀಡಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಕಂದಾಯ ಗ್ರಾಮಗಳೆಂದು ಗುರುತಿಸಲು ಇರುವ ಮಾನದಂಡಗಳಾವುವು; (ವಿವರ ನೀಡುವುದು)

(ಈ) ಕಂದಾಯ ಗ್ರಾಮಗಳಲ್ಲಿ ಫಲಾನುಭವಿಗಳಿಗೆ ನಿವೇಶನ ನೀಡಲು ಇರುವ ಮಾನದಂಡಗಳೇನು ? (ವಿವರ ನೀಡುವುದು)

## ಅಂಬೇಡ್ಕರ್ ಅಭಿವೃದ್ಧಿ ನಿಗಮದಡಿ ನೀಡುವ ಸೌಲಭ್ಯಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೦ (೧೦೩೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಸಾಲಿನಿಂದ ೨೦೨೦–೨೧ನೇ ಸಾಲಿನವರೆಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯ ಬಲಪಡಿಸಲು ಅಂಬೇಡ್ಕರ್ ಅಭಿವೃದ್ಧಿ ನಿಗಮದಡಿ ನೀಡುವ ಸೌಲಭ್ಯಗಳು ಯಾವುವು ; (ತಾಲ್ಲೂಕುವಾರು ವರ್ಷವಾರು ಮಾಹಿತಿ ನೀಡುವುದು)

(ಆ) ೨೦೨೦–೨೧ನೇ ಸಾಲಿನಲ್ಲಿ ನಿಗಮದಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲು ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ತಾಲ್ಲೂಕು ನೋಡಲ್ ಅಧಿಕಾರಿ ಮತ್ತು ಜಿಲ್ಲಾ ವ್ಯವಸ್ಥಾಪಕರು ಈವರೆವಿಗೂ ಸಭೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸರ್ಕಾರದ ಮಹಾತ್ವಕಾಂಕ್ಷೆ ಯೋಜನೆಯನ್ನು ಬಡ ಫಲಾನುಭವಿಗಳಿಗೆ ಸಿಗದಂತೆ ವಿಳಂಬ ಧೋರಣೆ ಮಾಡುತ್ತಿರುವ ಜಿಲ್ಲಾ ವ್ಯವಸ್ಥಾಪಕರ ಮತ್ತು ತಾಲ್ಲೂಕು ನೋಡಲ್ ಅಧಿಕಾರಿಯವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಪಶು ಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೧ (೧೦೩೭) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೧ನೇ ಸಾಲಿಗೆ ಮಂಡ್ಯ ಜಿಲ್ಲೆಯಲ್ಲಿ ಪಶುಸಂಗೋಪನಾ ಇಲಾಖೆಯಿಂದ ನಿಗದಿಪಡಿಸಿರುವ ವಿವಿಧ ಯೋಜನೆಗಳಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ತಾಲ್ಲೂಕುವಾರು ವಿವಿಧ ಯೋಜನೆಗಳ ಭೌತಿಕ ಮತ್ತು ಆರ್ಥಿಕ ಗುರಿ ಎಷ್ಟು ; ಹಾಗೂ ತಾಲ್ಲೂಕಿನ ಜನಸಂಖ್ಯಾವಾರು ನಿಗಧಿಪಡಿಸಿರುವ ಫಲಾನುಭವಿಗಳ ಸಂಖ್ಯೆ ಸರಿಯಾಗಿದೆಯೇ ;

(ಇ) ಕೋವಿಡ್–೧೯ರಂತಹ ಸಂಕಷ್ಟದ ಸಮಯದಲ್ಲಿ ರೈತ ಸಮುದಾಯಕ್ಕೆ ಆಸರೆಯಾಗಿದ್ದ ಮಹಾತ್ವಾಕಾಂಕ್ಷಿಯಾಗಿದ್ದ ಪಶು ಭಾಗ್ಯ ಯೋಜನೆಯುನ್ನು ೨೦೨೦–೨೧ನೇ ಸಾಲಿನಲ್ಲಿ ಕೈಬಿಟ್ಟಿರುವುದಕ್ಕೆ ಕಾರಣವೇನು ;

(ಈ) ಮುಂದಿನ ಸಾಲಿನಲ್ಲಿ ಈ ಯೋಜನೆಯನ್ನು ಪುನಃ ಪ್ರಾರಂಭಿಸುವ ಯೋಜನೆ ಸರ್ಕಾರಕ್ಕಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ;

(ಉ) ಫಲಾನುಭವಿಗಳ ಸಂಖ್ಯೆಯುನ್ನು ಮುಂದಿನ ವರ್ಷ ದ್ವಿಗುಣಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; (ಮಾಹಿತಿ ನೀಡುವುದು)

## ಸರ್ಕಾರಿ ಗುಂಡುತೋಪು, ಗೋಮಾಳಗಳಲ್ಲಿ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೨ (೧೦೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆಯಲ್ಲಿ ಸರ್ಕಾರಿ ಗುಂಡುತೋಪು, ಗೋಮಾಳಗಳಲ್ಲಿ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿರುವ ಒಟ್ಟು ಸರ್ಕಾರಿ ಗುಂಡುತೋಪುಗಳೆಷ್ಟು ; ಅದರಲ್ಲಿ ಈಗಾಗಲೇ ಒತ್ತುವರಿ ಮಾಡಿ ಅಕ್ರಮವಾಗಿ ಸಾಗುವಳಿ ಮಾಡುತ್ತಿರುವ ಗುಂಡು ತೋಪುಗಳೆಷ್ಟು ; ಆಗಿದ್ದಲ್ಲಿ ಸರ್ಕಾರ ಅವುಗಳನ್ನು ತೆರವುಗೊಳಿಸಲು ಕೈಗೊಂಡಿರುವ ಕ್ರಮಗಳೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅಕ್ರಮವಾಗಿ ಸಾಗುವಳಿ ಮಾಡುತ್ತಿರುವವರಿಗೆ ಸಕ್ರಮಗೊಳಿಸಲು ಅವಕಾಶವಿದೆಯೇ ; (ಪೂರ್ಣ ವಿವರ ನೀಡುವುದು)

(ಈ) ಗುಂಡುತೋಪುಗಳಲ್ಲಿ ಮರಗಳನ್ನು ಬೆಳೆಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವದು)

## SCP & TSP ಯೋಜನೆ ಅಡಿಯಲ್ಲಿ ಅನುದಾನ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೩ (೯೧೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯಿಂದ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ ಯೋಜನೆಯಡಿಯಲ್ಲಿ ರಾಯಚೂರು ಜಿಲ್ಲೆಗೆ ಮಂಜೂರಾದ ಅನುದಾನವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗೆ ಎಷ್ಟೆಷ್ಟು ಹಣ ಖರ್ಚಾಗಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಅಮೃತ್ ಮಹಲ್ ಮತ್ತು ಕಾವಲುಗಳ ಅಭಿವೃದ್ಧಿ ಬಗ್ಗೆ

**ಶ್ರೀ ಎಸ್.ಎಲ್. ಭೋಜೆಗೌಡ (ಶಿಕ್ಷಕರ ಕ್ಷೇತ್ರ) :–**

೭೫೪ (೮೮೪) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸುಮಾರು ೫೦೦ ವರ್ಷಗಳ ಇತಿಹಾಸವಿರುವ ವಿದ್ಯುತ್ ಮಹಲ್ ಮತ್ತು ಕಾವಲುಗಳು ಅಭಿವೃದ್ಧಿ ಕಾಣದೇ ಹಿಂದುಳಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಅಭಿವೃದ್ಧಿ ದೃಷ್ಟಿಯಿಂದ ಸರ್ಕಾರ ಇದುವರೆವಿಗೂ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಹಾಗೂ ಬಿಡುಗಡೆಯಾಗಬೇಕಿರುವ ಅನುದಾನವೆಷ್ಟು ; ಅನುದಾನ ಬಿಡುಗಡೆಯಲ್ಲಿ ವಿಳಂಬ ಧೋರಣೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಯಾವ ಕ್ರಮ ತೆಗೆದುಕೊಳ್ಳಲಾಗುವುದು ;

(ಇ) ಪಶುಪಾಲನಾ ಇಲಾಖೆಯ ನೂರಾರು ಅಮೃತ್ ಮಹಲ್ ರಾಸುಗಳನ್ನು ಗೋಶಾಲೆಗಳಿಗೆ ಮಠಗಳಿಗೆ ದಾನವಾಗಿ ನೀಡುತ್ತಿದ್ದು, ಇದರಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಸುಮಾರು ಸಾವಿರಕ್ಕೂ ಅಧಿಕ ರಾಸುಗಳನ್ನು ಪರಭಾರೆ ಮಾಡುವ ಹುನ್ನಾರ ಕಂಡು ಬಂದಿರುವುದು ಸರ್ಕಾರದ ಗಮನಕ್ಕೆ

ಬಂದಿದೆಯೇ ; ಹಾಗಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಅಮೃತ್ ಮಹಲ್ ರಾಸುಗಳು ಹಲವು ವಿಶಿಷ್ಟ ಲಕ್ಷಣಗಳನ್ನು ಹೊಂದಿದ್ದು, ರಾಸುಗಳ ನಿರ್ವಹಣೆಯಲ್ಲಿ ಇಲಾಖೆಯು ವಿಫಲವಾಗಿದ್ದು, ವಯಸ್ಸಾದ ಮತ್ತು ಉಪಯೋಗವಿಲ್ಲದ ರಾಸುಗಳನ್ನು ಮಾತ್ರ ಖಾಸಗಿ ಗೋಶಾಲೆಗಳಿಗೆ ನೀಡಲಾಗಿದೆ ಎಂಬ ಮಾಹಿತಿ ಸರ್ಕಾರಕ್ಕೆ ಇದೆಯೇ ; ಹಾಗಿದ್ದಲ್ಲಿ, ಸರ್ಕಾರವು ಈ ಸಂಬಂಧ ಕೈಗೊಂಡಿರುವ ಕಾನೂನು ಕ್ರಮಗಳೇನು ;

(ಊ) ಕಳೆದ ೧೦ ವರ್ಷದಿಂದ ರಾಸುಗಳ ಸಗಣಿ ಮತ್ತು ಗೊಬ್ಬರವನ್ನು ಹರಾಜು ಮಾಡಲಾಗಿದೆ ಹರಾಜಿನಿಂದ ಬಂದ ಆದಾಯವೆಷ್ಟು ; (ಪೂರ್ತಿ ವಿವರ ನೀಡುವುದು)

(ಋ) ಕಳೆದ ೧೦ ವರ್ಷದ ರಾಸುಗಳ ಉತ್ಪಾದನೆ ಮತ್ತು ಅವುಗಳ ವಿತರಣೆ ಮತ್ತು ಅದರಿಂದ ಬಂದ ಆದಾಯವೆಷ್ಟು ?

## ಗುತ್ತಿಗೆದಾರರ ನೋಂದಣಿಯಲ್ಲಿ ಆಗಿರುವ ಅಕ್ರಮ ಮತ್ತು ಅವೈಜ್ಞಾನಿಕ ಹಂಪ್ಸ್‌ಗಳ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರ ಕ್ಷೇತ್ರ) :-**

೭೫೫ (೯೧೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೨೦೧೮-೧೯ನೇ ಸಾಲಿನಿಂದ ಪ್ರಸ್ತುತ ದಿನಾಂಕದವರೆಗೆ PWD-Decode-೨೦೧೪ರ ಪ್ರಕಾರ ಎಷ್ಟು ಗುತ್ತಿಗೆದಾರರ ನೋಂದಣಿ (Registration) ಆಗಿದೆ ; (ವಲಯವಾರು ಹಾಗೂ

ಜಿಲ್ಲಾವಾರು ನೋಂದಣಿಯಾದ ಗುತ್ತಿಗೆದಾರರ ಹೆಸರುಗಳೊಂದಿಗೆ ವಿವರ ನೀಡುವುದು)

(ಆ) ರಾಜ್ಯದಲ್ಲಿನ ರಸ್ತೆಗಳಲ್ಲಿ ರಸ್ತೆ ಹುಬ್ಬುಗಳು ವೈಜ್ಞಾನಿಕವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ರಸ್ತೆ ಹುಬ್ಬುಗಳನ್ನು ವೈಜ್ಞಾನಿಕವಾಗಿ ನಿರ್ಮಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ರಾಜ್ಯದಲ್ಲಿ ಅವೈಜ್ಞಾನಿಕ ರಸ್ತೆ ಹಂಪ್ಸ್‌ಗಳು ಎಲ್ಲೆಲ್ಲಿ ಇವೆ ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ವಿವಿಧ ಜಿಲ್ಲೆಗಳಲ್ಲಿ ಅಕ್ರಮವಾಗಿ ಗುತ್ತಿಗೆದಾರರ ನೋಂದಣಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ತನಿಖೆಯನ್ನು ಕೈಗೊಳ್ಳಲಾಗಿದೆಯೇ ; ತನಿಖೆ ಯಾವ ಹಂತದಲ್ಲಿದೆ ಮತ್ತು ತಪ್ಪಿತಸ್ಥರ ವಿರುದ್ಧ ಈವರೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಅಕ್ರಮ ಮರಳು ಸಾಗಾಣಿಕೆ ಬಗ್ಗೆ

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರ ಕ್ಷೇತ್ರ) :–**

೭೫೬ (೯೨೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ–ಬೀದರ್ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಇಲ್ಲಿಯವರೆಗೆ ಅಕ್ರಮ ಮರಳು ಸಾಗಣೆ ಸಂಬಂಧ ದಾಖಲಾದ ಕೇಸ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕಲಬುರಗಿ ಜಿಲ್ಲೆಯಲ್ಲಿ ಅಕ್ರಮ ಮರಳು ಸಾಗಣಿಕೆ ವೇಳೆ ವಶಕ್ಕೆ ಪಡೆದ ಮರಳಿನ ಮೌಲ್ಯ ಎಷ್ಟು ;

(ಇ) ಅಕ್ರಮ ಮರಳು ದಂಧೆ ತಡೆಗೆ ಸರ್ಕಾರ ಯಾವ ಕ್ರಮ

ಕೈಗೊಂಡಿದೆ ?

## ದೇವದಾಸಿಯರ ಪುನರ್‌ವಸತಿ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೭ (೧೦೩೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಜನ ದೇವದಾಸಿಯರಿದ್ದಾರೆ ; ಅವರಿಗೆ ಯಾವ ಯೋಜನೆಗಳನ್ನು ರೂಪಿಸಲಾಗಿದೆ ;

(ಆ) ಅವರ ಪುನರ್‌ವಸತಿಗೆ ಸರ್ಕಾರದಿಂದ ಕೈಗೊಳ್ಳಲಾದ ಕ್ರಮವೇನು ; ಎಷ್ಟು ಜನರಿಗೆ ಪುನರ್ ವಸತಿ ಕಲ್ಪಿಸಲಾಗಿದೆ ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಇ) ಸಮಾಜ ಕಲ್ಯಾಣ ಇಲಾಖೆಯಿಂದ ಎಷ್ಟು ಜನ ದೇವದಾಸಿಯರಿಗೆ ಯಾವ ರೀತಿಯಲ್ಲಿ ಅನುಕೂಲಗಳನ್ನು ಕಲ್ಪಿಸಿ ಅವರ ಜೀವನಮಟ್ಟ ಸುಧಾರಿಸಲಾಗಿದೆ ?

## ಗೋ ಹತ್ಯೆ ನಿಷೇಧ ಕಾಯಿದೆಯಿಂದ ಉಂಟಾಗುವ ಪರಿಣಾಮಗಳ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೮ (೧೦೩೧) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗೋ ಹತ್ಯೆ ನಿಷೇಧ ಕಾಯಿದೆಯನ್ನು ಜಾರಿಗೆ ತರುವುದರಿಂದ ರೈತರಿಗೆ ಉಂಟಾಗಬಹುದಾದ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕಾರ್ಯಕ್ರಮಗಳೇನು ;

(ಆ) ವಯಸ್ಸಾದ ಮತ್ತು ಹೊಲದಲ್ಲಿ ಉಳುಮೆ ಮಾಡಲು ಸಾಧ್ಯವಾಗದ ಗೋವುಗಳನ್ನು ಸರ್ಕಾರ ಖರೀದಿ ಮಾಡುತ್ತಿದೆಯೇ ; ಮಾಡುವುದಾದರೆ ಅವುಗಳ ಪಾಲನೆಗೆ ಯಾವ ರೀತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ;

(ಇ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಗೋ ಶಾಲೆಗಳು ನಡೆಯುತ್ತಿವೆ ; ಸರ್ಕಾರಿ ಹಾಗೂ ಖಾಸಗಿ ವತಿಯಿಂದ ಎಷ್ಟು ಗೋ ಶಾಲೆಗಳು ನಿರ್ವಹಣೆಯಾಗುತ್ತಿವೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಅಂಬೇಡ್ಕರ್, ಜಗಜೀವನರಾಂ ಭವನಗಳ ನಿರ್ಮಾಣ ಕಾರ್ಯದ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೫೯ (೧೦೩೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಂಬೇಡ್ಕರ್ ಭವನ, ಜಗಜೀವನರಾಂ ಭವನ ಮತ್ತು ವಾಲ್ಮೀಕಿ ಭವನಗಳನ್ನು ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ತಲಾ ಎಷ್ಟು ಭವನಗಳನ್ನು ನಿರ್ಮಿಸಲಾಗಿದೆ ; ಎಷ್ಟು ಪೂರ್ಣವಾಗಿವೆ ; ಎಷ್ಟು ನಿರ್ಮಾಣವಾಗಬೇಕಾಗಿದೆ ;

(ಆ) ಈ ಭವನಗಳ ನಿರ್ಮಾಣ ಕಾರ್ಯ ವಿಳಂಭವಾಗುತ್ತಿರುವುದಕ್ಕೆ ಕಾರಣಗಳೇನು ; ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯ ಹಣವನ್ನು ಬಳಸಿಕೊಂಡು ಶೀಘ್ರವಾಗಿ ಈ ಕಾರ್ಯ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಇ) ಈಗಲಾದರೂ ಹೆಚ್ಚು ಹಣ ಒದಗಿಸಿ ಈ ಭವನಗಳ ನಿರ್ಮಾಣಕಾರ್ಯ ಬೇಗ ಆಗುವಂತೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳಲಾಗುವುದೇ ?

## ದಾಖಲೆ ರಹಿತ ಕಂದಾಯ ಗ್ರಾಮಗಳ ಬಗ್ಗೆ

**ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೦ (೯೦೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಗುರುತಿಸಿರುವ ದಾಖಲೆ ರಹಿತ ಕಂದಾಯ ಗ್ರಾಮಗಳೆಷ್ಟು ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ದಾಖಲೆ ರಹಿತ ಕಂದಾಯ ಗ್ರಾಮಗಳಲ್ಲಿ ವಾಸಿಸುತ್ತಿರುವ ಜನರು ಮೂಲಭೂತ ಸೌಕರ್ಯಗಳಿಲ್ಲದೆ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ದಾಖಲೆ ರಹಿತ ಕಂದಾಯ ಗ್ರಾಮಗಳನ್ನು ಕಂದಾಯ ಗ್ರಾಮಗಳಾಗಿ ಘೋಷಣೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳೇನು ; (ವಿವರ ನೀಡುವುದು)

(ಈ) ಜಿಲ್ಲೆಯಲ್ಲಿನ ದಾಖಲೆ ರಹಿತ ಕಂದಾಯ ಗ್ರಾಮಗಳನ್ನು ಕಂದಾಯ ಗ್ರಾಮಗಳಾಗಿ ಘೋಷಣೆ ಮಾಡಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮುಜರಾಯಿ ದೇವಸ್ಥಾನಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಬಗ್ಗೆ

**ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೧ (೯೦೭) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆರಾಧನಾ ಯೋಜನೆಯಡಿ ಕಳೆದ ೦೩ ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ದೇವಸ್ಥಾನವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಗೊಳಪಡುವ ದೇವಸ್ಥಾನಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು; ಈ ಸಿಬ್ಬಂದಿಗಳಿಗೆ ವೇತನ/ಗೌರವಧನ ನೀಡಲು ಅಗತ್ಯವಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಮುಜರಾಯಿ ಇಲಾಖೆಯ ವ್ಯಾಪ್ತಿಗೊಳಪಡುವ ದೇವಸ್ಥಾನಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ವೇತನ/ಗೌರವಧನ ಪಾವತಿಯಾಗದೇ ಇರುವ ಸಿಬ್ಬಂದಿಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಸಮಸ್ಯೆಯ ಪರಿಹಾರಕ್ಕಾಗಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದ ಮೀನುಗಾರಿಕೆ ಉದ್ಯಮದಲ್ಲಿ ತೊಡಗಿಸಿಕೊಂಡಿರುವ ಜನಾಂಗದ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೭೬೨ (೧೦೨೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಮೀನುಗಾರಿಕೆ ಇಲಾಖೆಯಿಂದ ರಾಜ್ಯದ ಮೀನುಗಾರಿಕೆ ಉದ್ಯಮದ ಜನಾಂಗದ ಅಭಿವೃದ್ಧಿಗೆ ಯಾವ ಕಾರ್ಯಕ್ರಮಗಳನ್ನು/ ಯೋಜನೆಗಳನ್ನು ಜಾರಿಗೊಳಿಸಲಾಗಿದೆ ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ರಾಜ್ಯದ ಮೀನುಗಾರಿಕೆ ಇಲಾಖೆಯಿಂದ ಕೆಲವು ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಇ) ಪ್ರಸ್ತುತ ಸಾಲಿನಲ್ಲಿ ಯಾವುದಾದರೂ ನೂತನ ಯೋಜನೆಗಳನ್ನು ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ಸರ್ಕಾರಿ ಜಮೀನುಗಳನ್ನು ಖಾಸಗಿಯವರು ಅತಿಕ್ರಮಿಸಿರುವ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೭೬೩ (೧೦೩೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನಗರ ಮತ್ತು ಪಟ್ಟಣ ಪ್ರದೇಶಗಳ ಸುತ್ತಲಿನ ವ್ಯಾಪ್ತಿಯಲ್ಲಿ ಸರ್ಕಾರದ ಕಂದಾಯ ಇಲಾಖೆ ವ್ಯಾಪ್ತಿಯಲ್ಲಿ ಇರುವ ಹಲವು ಗೋಮಾಳ ಮತ್ತು ಸರ್ಕಾರಿ ಜಮೀನುಗಳು ಖಾಸಗಿಯವರಿಂದ ಅತಿಕ್ರಮಗೊಳಿಸಲ್ಪಟ್ಟಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಜಮೀನುಗಳ ವಿಸ್ತೀರ್ಣ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಅತಿಕ್ರಮಿಸಲ್ಪಟ್ಟ ಜಮೀನುಗಳ ಪೈಕಿ ಎಷ್ಟು ಪ್ರಕರಣಗಳಲ್ಲಿ ಸರ್ಕಾರದಿಂದ ಎಷ್ಟು ವಿಸ್ತೀರ್ಣದ ಜಮೀನನ್ನು ವಶಕ್ಕೆ ಪಡೆಯಲಾಗಿದೆ ; (ವಿವರ ನೀಡುವುದು)

(ಇ) ಅತಿಕ್ರಮಿಸಲ್ಪಟ್ಟ ಜಮೀನುಗಳನ್ನು ಸರ್ಕಾರದ ವಶಕ್ಕೆ ಪಡೆಯಲು ಸರ್ಕಾರಕ್ಕೆ ಇರುವ ತೊಡಕುಗಳೇನು ? (ವಿವರ ನೀಡುವುದು)

## ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಜನಾಂಗದ ಅಭಿವೃದ್ಧಿ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೭೬೪ (೧೦೨೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳ ಜನಾಂಗದ ಅಭಿವೃದ್ಧಿಗೆ ಯಾವ ಕಾರ್ಯಕ್ರಮಗಳನ್ನು / ಯೋಜನೆಗಳನ್ನು ಜಾರಿಗೊಳಿಸಲಾಗಿದೆ ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಈ ಇಲಾಖೆಯಿಂದ ಕೆಲವು ಯೋಜನೆಗಳನ್ನು ಸಮರ್ಪಕವಾಗಿ ಜಾರಿಗೊಳಿಸಲು ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಸರ್ಕಾರದ ಕ್ರಮವೇನು ; (ವಿವರ ನೀಡುವುದು)

(ಇ) ಪ್ರಸ್ತುತ ಸಾಲಿನಲ್ಲಿ ಯಾವುದಾದರೂ ನೂತನ ಯೋಜನೆಗಳನ್ನು ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)

## ರಾಜ್ಯದ ಕಂದಾಯ ಇಲಾಖೆಯಡಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಗ್ರಾಮ ಸಹಾಯಕರ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೭೬೫ (೯೨೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕಂದಾಯ ಇಲಾಖೆಯಡಿ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮ ಸಹಾಯಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದ್ಯದ ನೌಕರರಿಗೆ ನೀಡುತ್ತಿರುವ ಮಾಸಿಕ ವೇತನ ಎಷ್ಟು ; ಇವರು ಕಳೆದ ೪೦ ವರ್ಷಗಳಿಂದ ಕಡಿಮೆ ವೇತನಕ್ಕೆ ಕೆಲಸ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಗ್ರಾಮ ಸಹಾಯಕರನ್ನು ಸರ್ಕಾರ ಗ್ರೂಪ್ “ಡಿ” ದರ್ಜೆ ನೌಕರರೆಂದು ಪರಿಗಣಿಸಿ ಆದೇಶ ಹೊರಡಿಸುವುದು ಯಾವಾಗ ?

## ಕಳೆದ ೦೩ ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಗೆ ಬಿಡುಗಡೆಯಾದ ಅನುದಾನ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೬ (೯೯೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಕಳೆದೆರೆಡು ವರ್ಷಗಳಿಂದ ಸಮಾಜ ಕಲ್ಯಾಣ ಇಲಾಖೆಯಡಿ ನಡೆಸಲಾದ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾದ ಹಣವೆಷ್ಟು ; (ಮಾಹಿತಿ ನೀಡುವುದು)

(ಆ) ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಗ್ರಾಮೀಣ ಭಾಗದ ಯುವಕ ಯುವತಿಯರಿಗೆ ವಿಶೇಷ ಯೋಜನೆಗಳು ಮತ್ತು ರಚನಾತ್ಮಕ ಕಾರ್ಯಕ್ರಮಗಳ ತರಬೇತಿ ನೀಡುತ್ತಾರೆಯೇ ;

(ಇ) ಕೆಲವು ಜಿಲ್ಲೆಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ಅತ್ಯಂತ ನಿಷ್ಕ್ರಿಯವಾಗಿದೆ ಎನ್ನುವ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಸಮಾಜ ಕಲ್ಯಾಣ ಇಲಾಖೆಯಡಿ ಸಾಮಾಜಿಕ ಅಭಿವೃದ್ಧಿಗೆ ಯಾವ ಹೊಸ ಯೋಜನೆ ರೂಪಿಸಲಿದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಹೊಸ ತಾಲ್ಲೂಕುಗಳಲ್ಲಿ ಮಿನಿ ವಿಧಾನಸೌಧ ನಿರ್ಮಾಣದ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೬೭ (೯೯೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಕಮನಗರ, ಚೆಡಗುಪ್ಪ ಹಾಗೂ ಹುಲಸೂರು ಹೊಸ ತಾಲ್ಲೂಕುಗಳಾಗಿ ಘೋಷಣೆ ಆಗಿದ್ದು, ಈ

ತಾಲ್ಲೂಕುಗಳಿಗೆ ಮಿನಿ ವಿಧಾನಸೌಧ ನಿರ್ಮಾಣ ಮಾಡಲು ಸ್ಥಳ ಗುರುತಿಸಲಾಗಿದೆಯೇ ; ಗುರುತಿಸಿದ್ದಲ್ಲಿ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ಯಾವಾಗ ; ಈ ಕಾಮಗಾರಿಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ತಾಲ್ಲೂಕುಗಳಾಗಿ ಘೋಷಣೆಯಾದ ಮೇಲೆ ಈ ತಾಲ್ಲೂಕುಗಳಲ್ಲಿ ಯಾವ ಯಾವ ಸರ್ಕಾರಿ ಕಛೇರಿಗಳು ಕಾರ್ಯನಿರ್ವಹಿಸುತ್ತಿವೆ ಹಾಗೂ ಯಾವ ಯಾವ ಕಛೇರಿಗಳು ಕಾರ್ಯನಿರ್ವಹಿಸುತ್ತಿಲ್ಲ ; ಈ ಕಛೇರಿಗಳ ಪ್ರಾರಂಭಕ್ಕೆ ವಿಳಂಬವಾಗಲು ಕಾರಣಗಳೇನು ?

## ಪುಂಜಾಲಕಟ್ಟೆ ಚಾರ್ಮೂಡಿ ರಾಷ್ಟ್ರೀಯ ಹೆದ್ದಾರಿಯ ಚತುಷ್ಪಥ ಯೋಜನೆಯ ಮಾಹಿತಿ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೮ (೧೦೪೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಪುಂಜಾಲಕಟ್ಟೆ ಚಾರ್ಮೂಡಿ ರಾಷ್ಟ್ರೀಯ ಹೆದ್ದಾರಿ (NH-73) ಚತುಷ್ಪಥ ಯೋಜನೆಯ ಪ್ರಗತಿಯು ಯಾವ ಹಂತದಲ್ಲಿದೆ ? (ಸಂಪೂರ್ಣ ವಿವರ ನೀಡುವುದು)

## ಮಂಗಳೂರು–ಮೂಡಬಿದ್ರೆ ರಾಷ್ಟ್ರೀಯ ಹೆದ್ದಾರಿಯ ಚತುಷ್ಪಥ ಯೋಜನೆಯ ಮಾಹಿತಿ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬೯ (೧೦೪೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು–ಮೂಡಬಿದ್ರೆ ರಾಷ್ಟ್ರೀಯ ಹೆದ್ದಾರಿ (NH-169) ರ ಚತುಷ್ಪಥ ಯೋಜನೆಯ ಕಾಮಗಾರಿ ಪ್ರಗತಿ ಯಾವ ಹಂತದಲ್ಲಿದೆ ; (ವಿವರ ಒದಗಿಸುವುದು)

(ಆ) ಸದರಿ ಯೋಜನೆಗೆ ಸಂಬಂಧಿಸಿದಂತೆ ಯೋಜನೆಯ ಒಟ್ಟು ಮೊತ್ತ ಎಷ್ಟು ; ಹಾಗೂ ಟೆಂಡರ್ ಪ್ರಗತಿಯು ಯಾವ ಹಂತದಲ್ಲಿದೆ ; ಈ ಕುರಿತಂತೆ ಸಂಪೂರ್ಣ ವಿಸ್ತೃತ ಮಾಹಿತಿ ಒದಗಿಸುವುದು ?

## ಕಂದಾಯ ಇಲಾಖೆಯಲ್ಲಿ ಅಕ್ರಮ–ಸಕ್ರಮದಡಿ ಭೂ ಮಂಜೂರಾತಿ ಕುರಿತು ಮಾಹಿತಿ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೦ (೧೦೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕು ವಂಡ್ಸೆ ಹೋಬಳಿಯ ಕರ್ಕುಂಜೆ ಗ್ರಾಮ ವ್ಯಾಪ್ತಿಯ ಸರ್ಕಾರಿ ಸರ್ವೆ ನಂ. ೧೨೦ರಲ್ಲಿ ಮಂಜೂರಾಗಿರುವ ೨.೯೬ ಎಕರೆ ಖಾತಾ ನಂ. ೧೦೧೫ರಲ್ಲಿನ ಜಾಗವು ಚಕ್ರ ನದಿಗೆ ಹೊಂದಿಕೊಂಡಿದ್ದು ಇದು ನದಿ ದಂಡೆ ಅತಿಕ್ರಮಣ ವ್ಯಾಪ್ತಿಗೆ ಒಳಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಜಾಗದ ಮಂಜೂರಾತಿಗೆ ನಕಲಿ ದಾಖಲೆ ಸೃಷ್ಟಿಸಿ ಮಂಜೂರಾತಿ ಮಾಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ಜಾಗವನ್ನು ಭೂ ಕಂದಾಯ ಕಾಯ್ದೆ ೧೯೬೪ರ ಕಲಂ ೧೯೨ಎ ರಂತೆ ಭೂ ಮಂಜೂರಾತಿ ಹಿಂಪಡೆಯಲು ಕ್ರಮ ಕೈಗೊಳ್ಳಲಾಗುವುದೇ ; (ವಿವರ ಒದಗಿಸುವುದು)

(ಈ) ಸರ್ವೆ ನಂ. ೧೨೦ರಲ್ಲಿ ೨.೯೬ ಎಕರೆ Land Plotting ಸಂಬಂಧಿಸಿದಂತೆ ಸರ್ವೆ ಕಾರ್ಯ ನಡೆಸಲಾಗಿದೆಯೇ ; ನಡೆಸಿದ್ದಲ್ಲಿ ಸರ್ವೆ ನಡೆಸಿದ ಅಧಿಕಾರಿಯ ವಿವರ ಸೇರಿದಂತೆ ಸಂಪೂರ್ಣ ನಡುವಳಿಯ ಪ್ರತಿ ನೀಡುವುದು ;

(ಉ) ಸದರಿ Plotting ೨.೯೬ ಎಕರೆ ಸಂಬಂಧಿಸಿದಂತೆ ಕುಂದಾಪುರ ತಹಸೀಲ್ದಾರರಿಗೆ ಆಕ್ಷೇಪಣೆಗಳು ಸಲ್ಲಿಕೆಯಾಗಿದೆಯೇ ; ಹಾಗಿದ್ದಲ್ಲಿ, ಈ ಕುರಿತಂತೆ ಕೈಗೊಂಡ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ವೈಯಾಲಿಕಾವಲ್ ಗೃಹ ನಿರ್ಮಾಣ ಸಹಕಾರ ಸಂಘದ ಪರವಾಗಿ ಭೂಸ್ವಾಧೀನಪಡಿಸಿಕೊಂಡಿರುವ ಜಮೀನುಗಳ ಬಗ್ಗೆ

**ಶ್ರೀ ಸಿ.ಎಂ. ಇಬ್ರಾಹಿಂ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭೧ (೯೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಉತ್ತರ ತಾಲ್ಲೂಕು, ಕಸಬಾ ಹೋಬಳಿ, ನಾಗವಾರ ಗ್ರಾಮದಲ್ಲಿ ವೈಯಾಲಿಕಾವಲ್ ಗೃಹ ನಿರ್ಮಾಣ ಸಹಕಾರ ಸಂಘದ ಪರವಾಗಿ ಸ್ವಾಧೀನಪಡಿಸಿಕೊಂಡಿರುವ ಜಮೀನುಗಳು ಯಾವುವು ; ಮತ್ತು ಸ್ವಾಧೀನದಿಂದ ಕೈಬಿಟ್ಟಿರುವ ಜಮೀನುಗಳು ಎಷ್ಟು ; (ವಿವರಗಳ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು)

(ಆ) ಪ್ರಸ್ತುತ ಎಷ್ಟು ಎಕರೆ ಜಮೀನನ್ನು ವೈಯಾಲಿಕಾವಲ್ ಗೃಹ ನಿರ್ಮಾಣ ಸಹಕಾರ ಸಂಘಕ್ಕೆ ಭೂಸ್ವಾಧೀನ ನೀಡಲಾಗಿದೆ ; ಜಮೀನುಗಳ ದೃಢೀಕೃತ ಹದ್ದುಬಸ್ತು ನಕ್ಷೆಯನ್ನು ತಯಾರಿಸಲಾಗಿದೆಯೇ ; ಹಾಗಿದ್ದಲ್ಲಿ ಮಾಹಿತಿ ಒದಗಿಸುವುದು ; ಇಲ್ಲದಿದ್ದಲ್ಲಿ ಕಾರಣವೇನು ;

(ಇ) ಭೂಸ್ವಾಧೀನಕ್ಕೆ ಸಂಬಂಧಪಟ್ಟಂತೆ, Notification No. RD 183 AQB 82 dt: 21.02.1986, No. LAQ (II) LAC/ 293/83-84, Date: 05.05.1988, No. LAQ (II) LAC/298/83-84, Date : 05.05.1998, LAQ (I) LAC 298/83-84 dated 01.09.1988 and LAQ (I) SR 298/83-84 dated 23.11.1992 ಗಳಲ್ಲಿ ಯಾವ ಜಮೀನಿನ ಸರ್ವೆ ನಂಬರ್‌ಗಳನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ ; ಯಾವ ಸರ್ವೆ ನಂಬರ್‌ಗಳನ್ನು ಕೈಬಿಡಲಾಗಿದೆ ; ಯಾವ ಸರ್ವೆ ನಂಬರ್‌ಗಳನ್ನು ಕೈಬಿಡುವ ಪ್ರಕ್ರಿಯೆಯಲ್ಲಿವೆ ; (ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಈ) ಭೂಸ್ವಾಧೀನ ಪ್ರಕ್ರಿಯೆಗೆ ಕೆಲವು ಭೂ ಮಾಲೀಕರು ನ್ಯಾಯಾಲಯದ ಮೊರೆ ಹೋಗಿದ್ದು, ಕಾಲ ಕಾಲಕ್ಕೆ ಮಾನ್ಯ ನ್ಯಾಯಾಲಯಗಳು ನೀಡಿದ ತೀರ್ಪು/ಆದೇಶಗಳನ್ನು ಪಾಲಿಸಲಾಗಿದೆಯೇ ; ಇಲ್ಲದಿದ್ದಲ್ಲಿ ಕಾರಣವೇನು ?

## ಪ್ರಸಕ್ತ ಸಾಲಿನಲ್ಲಿ ಮಳೆಗಾಲದಲ್ಲಿ ಪ್ರವಾಹದಿಂದ ಆಗಿರುವ ಬೆಳೆ ಹಾನಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೨ (೧೦೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈ ವರ್ಷದ ಮಳೆಗಾಲದ ಸಂದರ್ಭದಲ್ಲಿ ಬೆಳಗಾವಿಯಲ್ಲಿ ವಿಪರೀತ ಪ್ರವಾಹ ಬಂದಿದ್ದು ಇದರಿಂದ ಎಷ್ಟು ಎಕರೆ ಬೆಳೆ ಹಾನಿಯಾಗಿದೆ ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಈ ಜಿಲ್ಲೆಯಲ್ಲಿ ಕಳೆದ ವರ್ಷವೂ ಮಳೆ ಹಾಗೂ ಪ್ರವಾಹದಿಂದಾಗಿ ಬೆಳೆಗಳಿಗೆ ಅಪಾರ ಪ್ರಮಾಣದ ಹಾನಿಯಾಗಿದ್ದು, ಹಾನಿಯಾಗಿರುವ ಬೆಳೆಯ ವಿವರ ಒದಗಿಸುವುದು ;

(ಇ) ಪ್ರಸ್ತುತ ಜಿಲ್ಲೆಯಲ್ಲಿ ಆದ ಬೆಳೆಹಾನಿ ಪರಿಹಾರಕ್ಕೆ ಸಂಬಂಧಿಸಿದಂತೆ, ಕಳೆದ ವರ್ಷ ಹಾಗೂ ಪ್ರಸಕ್ತ ವರ್ಷದಲ್ಲಿ ವಿತರಿಸಲಾದ ಪರಿಹಾರದ ಮೊತ್ತದ ಮಾಹಿತಿ ಒದಗಿಸುವುದು ;

(ಈ) ಕಳೆದ ೨೦೧೯–೨೦ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಆದ ಬೆಳೆಗಳ ಹಾನಿ ಎಷ್ಟು ; ಈ ಹಾನಿಗೊಳಗಾದ ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ ; ಇನ್ನುಳಿದ ರೈತರಿಗೆ ಯಾವ ಕಾಲಮಿತಿಯಲ್ಲಿ ಪರಿಹಾರ ಒದಗಿಸಲಾಗುವುದು ?

## ಪ್ರಸಕ್ತ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಪ್ರಕೃತಿ ವಿಕೋಪದಿಂದ ಉಂಟಾದ ಹಾನಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೩ (೧೦೧೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನ ಮಳೆಗಾಲದ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಅತೀ ಹೆಚ್ಚು ಮಳೆ ಸುರಿದು ಪ್ರವಾಹವುಂಟಾಗಿ ಅಪಾರ ಹಾನಿ ಸಂಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ತೊಂದರೆಗೀಡಾದ ಜನರಿಗೆ ಸಹಾಯಹಸ್ತ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ೨೦೧೮-೧೯, ೨೦೧೯-೨೦ ಹಾಗೂ ೨೦೨೦-೨೧ನೇ ಸಾಲಿನಲ್ಲಿ ಈ ಜಿಲ್ಲೆಯಲ್ಲಿ ಆಗಿರುವ ಮಳೆಯ ಪ್ರಮಾಣವೆಷ್ಟು ;

(ಈ) ಕಳೆದ ವರ್ಷ ಹಾಗೂ ಪ್ರಸಕ್ತ ವರ್ಷದಲ್ಲಿ ಜಿಲ್ಲೆಯಲ್ಲಿ ಪ್ರವಾಹದಿಂದಾಗಿ ಉಂಟಾದ ಹಾನಿಯ ಪ್ರಮಾಣ ಎಷ್ಟು ;

(ಉ) ಈ ಪ್ರಕೃತಿ ವಿಕೋಪದಿಂದಾಗಿ ಪ್ರಸ್ತುತ ಜಿಲ್ಲೆಗೆ ಆದ ಆರ್ಥಿಕ ಹಾನಿ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಪ್ರಸಕ್ತ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಪ್ರಕೃತಿ ವಿಕೋಪದಿಂದ ಹಾನಿಗೊಳಗಾದ ಮನೆಗಳ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೭೪ (೧೦೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಈ ವರ್ಷ ಪ್ರಕೃತಿ ವಿಕೋಪ ಹಾಗೂ ಹೆಚ್ಚಿನ ಮಳೆಯಿಂದ ಹಾನಿಗೊಳಗಾಗಿರುವ ಮನೆಗಳ ಸಂಖ್ಯೆ ಎಷ್ಟು ;

(ಆ) ಹಾನಿಗೊಳಗಾದ ಮನೆಗಳ ಸಂತ್ರಸ್ಥರಿಗೆ ಪರಿಹಾರ ಕೊಡಲು ಸರ್ಕಾರ ಹಾಕಿಕೊಂಡಿರುವ ಮಾನದಂಡಗಳೇನು ;

(ಇ) ಕಳೆದ ಹಾಗೂ ಪ್ರಸಕ್ತ ವರ್ಷದ ಸಾಲಿನಲ್ಲಿ ಪ್ರಕೃತಿ ವಿಕೋಪದಿಂದ ಹಾನಿಗೊಳಗಾದ ಮನೆಗಳ ಪೈಕಿ ಇಲ್ಲಿಯವರೆಗೆ ಎಷ್ಟು ಮನೆಗಳಿಗೆ ಪರಿಹಾರ ಒದಗಿಸಲಾಗಿದೆ ? (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

## ಪೂನಾ ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೫ (೧೦೧೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪೂನಾದಿಂದ ಬೆಂಗಳೂರಿಗೆ ಇರುವ ರಾಷ್ಟ್ರೀಯ ಹೆದ್ದಾರಿಯ ಉದ್ದವೆಷ್ಟು ;

(ಆ) ಸದರಿ ಹೆದ್ದಾರಿಯ ಎಷ್ಟು ಕಿ.ಮೀ. ರಸ್ತೆಯನ್ನು ಚತುಷ್ಪಥ (4 Lane) ಮತ್ತು ಷಟ್ಪಥ (6 Lane) ಗಳಾಗಿ ಪರಿವರ್ತಿಸಲಾಗುವುದು;

(ಇ) ಈ ಯೋಜನೆಯ ಅನುಷ್ಠಾನಕ್ಕಾಗಿ ವ್ಯಯಿಸಿದ ಅಂದಾಜು ಮೊತ್ತವೆಷ್ಟು ; ಸದರಿ ಯೋಜನೆಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಅನುಪಾತವೆಷ್ಟು ?

## ಪುಣೆ-ಬೆಂಗಳೂರು ಟೋಲ್ ನಾಕಾಗಳ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೭೭೬ (೧೦೧೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಪುಣೆ–ಬೆಂಗಳೂರು ಹೆದ್ದಾರಿಯಲ್ಲಿ ಬರುವ ಟೋಲ್ ನಾಕಾಗಳ ಸಂಖ್ಯೆ ಎಷ್ಟು ; ಈ ಟೋಲ್ ನಾಕಾಗಳನ್ನು ಎಷ್ಟು ವರ್ಷಗಳ ವರೆಗೆ ಗುತ್ತಿಗೆಗೆ ಕೊಡಲಾಗಿದೆ ;

(ಆ) ಈ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಸರ್ವೀಸ್ ರಸ್ತೆಗಳನ್ನು ಯಾರು ನಿರ್ವಹಣೆ ಮಾಡುತ್ತಾರೆ ;

(ಇ) ಸದರಿ ಹೆದ್ದಾರಿಯ ಬಹಳಷ್ಟು ಕಡೆಗಳಲ್ಲಿ ಸರ್ವೀಸ್ ರಸ್ತೆಗಳು ತೀರಾ ಅಸ್ತವ್ಯಸ್ತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ರಸ್ತೆಗಳ ದುರಸ್ಥಿಯ ಕಾರ್ಯವನ್ನು ಯಾವಾಗ ಕೈಗೊಳ್ಳಲಾಗುವುದು ?

## ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ ನೀಡಿಕೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೭೭೭ (೯೧೬) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಹಾಲು ಉತ್ಪಾದಕರ ಒಕ್ಕೂಟಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಸದರಿ ಒಕ್ಕೂಟಗಳಲ್ಲಿನ ಹಾಲು ಉತ್ಪಾದಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಪ್ರತ್ಯೇಕವಾದ ಮಾಹಿತಿ ನೀಡುವುದು)

(ಇ) ಹಾಲು ಉತ್ಪಾದಕರಿಗೆ ಪ್ರತಿ ಲೀಟರ್‌ಗೆ ಸರ್ಕಾರದಿಂದ ನೀಡಲಾಗುತ್ತಿರುವ ಪ್ರೋತ್ಸಾಹಧನದ ಮೊತ್ತವೆಷ್ಟು ;

(ಈ) ಹಾಲು ಉತ್ಪಾದಕರಿಗೆ ಬಾಕಿ ನೀಡಬೇಕಾಗಿರುವ ಪ್ರೋತ್ಸಾಹಧನದ ಮೊತ್ತವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಉ) ಪ್ರೋತ್ಸಾಹಧನ ಹೆಚ್ಚಿಸಲು ಸರ್ಕಾರ ಚಿಂತಿಸುವುದೇ ; ಸರ್ಕಾರದಿಂದ ಹಾಲು ಉತ್ಪಾದಕರಿಗೆ ನೀಡಲಾಗುತ್ತಿರುವ ಪ್ರೋತ್ಸಾಹಧನ ಹೊರತುಪಡಿಸಿ, ನೀಡಲಾಗುತ್ತಿರುವ ವಿಶೇಷ ರಿಯಾಯಿತಿ ಸೌಲಭ್ಯಗಳಾವುವು ? (ವಿವರ ನೀಡುವುದು)

## ಆಶ್ರಯ ಯೋಜನೆಯಡಿ ವಸತಿ ನಿರ್ಮಾಣ ಸಹಾಯ ಧನ ಹೆಚ್ಚಳದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೭೭೮ (೯೧೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಆಶ್ರಯ ಯೋಜನೆಯಡಿ ಮನೆ ನಿರ್ಮಾಣಕ್ಕಾಗಿ ಸರ್ಕಾರದಿಂದ ನೀಡಲಾಗುತ್ತಿರುವ ಸಹಾಯಧನದ ಮೊತ್ತವೆಷ್ಟು ;

(ಆ) ಸದರಿ ಮೊತ್ತದಲ್ಲಿ ಮನೆ ಪೂರ್ಣಗೊಳಿಸಲು ಸಾಧ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮನೆ ಕಟ್ಟಲು ಅಗತ್ಯವಿರುವ ಸಾಮಗ್ರಿಗಳು ಮತ್ತು ಕೂಲಿ ತುಂಬಾ ದುಬಾರಿಯಾಗಿರುವುದರಿಂದ ಬಡವರು ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸದರಿ ಮೊತ್ತವನ್ನು ಪರಿಷ್ಕರಿಸಲು ಸರ್ಕಾರ ಚಿಂತಿಸುವುದೇ ;

(ಉ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಪರಿಷ್ಕರಿಸಲಾಗುವುದು ?

## ರಾಜ್ಯದಲ್ಲಿರುವ ಟೋಲ್ ಪ್ಲಾಜಾಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೭೭೯ (೧೦೧೯) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿನ ಟೋಲ್ ಪ್ಲಾಜಾಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಮೇಲ್ಕಂಡ ಟೋಲ್ ಪ್ಲಾಜಾಗಳು ಯಾವ ದಿನಾಂಕದಿಂದ ಕಾರ್ಯಾರಂಭ ಮಾಡಿವೆ ; ಹಾಗೂ ಯಾವ ದಿನಾಂಕದಿಂದ ಶುಲ್ಕವನ್ನು ವಸೂಲಿ ಮಾಡಲಾಗುತ್ತಿದೆ ;

(ಇ) ಸದರಿ ಟೋಲ್ ಪ್ಲಾಜಾಗಳಲ್ಲಿ ಇದೂವರೆವಿಗೆ ಸಂಗ್ರಹಿಸಲಾದ ಮೊತ್ತವೆಷ್ಟು ; (ಟೋಲ್ ಪ್ಲಾಜಾವಾರು ಮಾಹಿತಿ ನೀಡುವುದು)

(ಈ) ಈ ಟೋಲ್ ಪ್ಲಾಜಾಗಳು ಶುಲ್ಕವನ್ನು ವಸೂಲಾತಿ ಮಾಡಲು ಇರುವ ನಿಯಮ/ನಿಬಂಧನೆಗಳೇನು ;

(ಉ) ಸದರಿ ಟೋಲ್ ಪ್ಲಾಜಾಗಳು ಅದಕ್ಕೆ ಸಂಬಂಧಿಸಿದ ರಸ್ತೆ, ಸರ್ವೀಸ್ ರಸ್ತೆ ಇತ್ಯಾದಿಗಳ ಎಲ್ಲಾ ಕಾಮಗಾರಿಗಳನ್ನು ಪೂರೈಸಿದ ನಂತರವೇ ಶುಲ್ಕ ವಿಧಿಸಲು ಪ್ರಾರಂಭಿಸಲಾಗಿದೆಯೇ ; ಇಲ್ಲದಿದ್ದರೆ, ಅಂತಹ ಟೋಲ್ ಪ್ಲಾಜಾಗಳು ಯಾವುವು ? (ವಿವರ ನೀಡುವುದು)

## ಗೋಹತ್ಯೆ ನಿಷೇಧ ಕಾಯ್ದೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೭೮೦ (೧೦೨೦) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕದಲ್ಲಿ ಗೋಹತ್ಯೆ ನಿಷೇಧ ಕಾಯ್ದೆ ಜಾರಿಯಾಗಿದೆಯೇ; ಹಾಗಿದ್ದಲ್ಲಿ, ಇದನ್ನು ಅನುಷ್ಠಾನಗೊಳಿಸಲು ಸರ್ಕಾರ ರೂಪಿಸಿರುವ ನಿಯಮಗಳೇನು ;

(ಆ) ಮೇಲ್ಕಂಡ ಕಾಯ್ದೆಯನ್ನು ಉಲ್ಲಂಘಿಸಿರುವ ಪ್ರಕರಣಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಬೆಂಗಳೂರು ನಗರದಲ್ಲಿರುವ ಗೋಮಾಂಸ ಮಾರಾಟ ಮಾಡುವ ಅಂಗಡಿಗಳ ಸಂಖ್ಯೆ ಎಷ್ಟು ; (ವಾರ್ಡ್‌ವಾರು ವಿವರ ನೀಡುವುದು)

(ಈ) ಮೇಲ್ಕಂಡ ಕಾಯ್ದೆ ಬಂದ ನಂತರ ಈ ಎಲ್ಲಾ ಗೋಮಾಂಸದ ಅಂಗಡಿಗಳು ಮುಚ್ಚಲ್ಪಟ್ಟಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು;

(ಉ) ಗೋಮಾಂಸದ ಅಂಗಡಿಗಳು ಮುಚ್ಚದಿರಲು ಹಾಗೂ ಕಾನೂನು ಪಾಲಿಸದೆ ಇರಲು ಕಾರಣರಾದ ಅಧಿಕಾರಿಗಳು ಯಾರ‍್ಯಾರು ? (ವಿವರಗಳನ್ನು ನೀಡುವುದು)

## ಮೀನುಗಾರಿಕೆ ವಸತಿ ಯೋಜನೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೭೮೧ (೧೦೨೩) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೀನುಗಾರಿಕೆ ಇಲಾಖೆ ವತಿಯಿಂದ ಅರ್ಹ ಮೀನುಗಾರರಿಗೆ ವಸತಿ ಯೋಜನೆ ರೂಪಿಸಲಾಗಿದೆಯೇ ;

(ಆ) ರೂಪಿಸಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಈ ಯೋಜನೆಗೆ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು ;

(ಇ) ಮೇಲ್ಕಂಡ ಯೋಜನೆ ಅಡಿಯಲ್ಲಿ ಕಳೆದ ೩ ವರ್ಷಗಳಲ್ಲಿ ಹಂಚಿಕೆ ಮಾಡಲಾದ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಈ) ಮೇಲ್ಕಂಡ ಯೋಜನೆ ಅನುಷ್ಠಾನಗೊಳಿಸಲು ಸರ್ಕಾರ ಅನುಸರಿಸುವ ಮಾನದಂಡಗಳೇನು ?

## ಸಂಘ/ಸಂಸ್ಥೆಗಳಿಗೆ ನೀಡಿರುವ ಅನುದಾನದ ವಿವರದ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೭೮೨ (೧೦೨೧) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಡಿಯಲ್ಲಿ ಬೇರೆ ಬೇರೆ ಸಂಘ ಸಂಸ್ಥೆಗಳಿಗೆ ನೀಡಿರುವ ಅನುದಾನ ಎಷ್ಟು ; (ವಿವರಗಳನ್ನು ಸಂಘ ಸಂಸ್ಥೆ/ಟ್ರಸ್ಟ್‌ವಾರು ಹಾಗೂ ವರ್ಷವಾರು ನೀಡುವುದು)

(ಆ) ಇಂತಹ ಅನುದಾನಗಳ ನೀಡಿಕೆಯಲ್ಲಿ ಸರ್ಕಾರ ಅನುಸರಿಸುವ ಮಾನದಂಡಗಳೇನು ;

(ಇ) ೨೦೨೦–೨೧ನೇ ಸಾಲಿನಲ್ಲಿ ಮೇಲ್ಕಂಡ ಯೋಜನೆಗೆ ಮೀಸಲಿಟ್ಟಿರುವ ಅನುದಾನದ ಮೊತ್ತ ಎಷ್ಟು ; ಖರ್ಚಾದ ಮೊತ್ತ ಎಷ್ಟು ; ಉಳಿಕೆ ಮೊತ್ತ ಎಷ್ಟು ? (ಮಾಹಿತಿ ನೀಡುವುದು)

## ಎಸ್.ಸಿ.ಪಿ/ಟಿ.ಎಸ್.ಪಿ ಅನುದಾನದ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೭೮೩ (೧೦೨೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆ ಅಡಿಯುಲ್ಲಿ ಹಂಚಿಕೆ ಮಾಡಲಾದ ಅನುದಾನವೆಷ್ಟು ; (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

(ಆ) ಈ ಅನುದಾನವನ್ನು ಹಂಚಿಕೆ/ಬಿಡುಗಡೆ ಮಾಡಲು ಅನುಸರಿಸುವ ಮಾನದಂಡಗಳೇನು ;

(ಇ) ಮೇಲ್ಕಂಡ ಅನುದಾನ ಬಿಡುಗಡೆಯಾಗಿ ಇನ್ನೂ ಖರ್ಚಾಗದೆ ಉಳಿದಿರುವ ಮೊತ್ತ ಎಷ್ಟು ? (ಜಿಲ್ಲಾವಾರು ವಿವರಗಳನ್ನು ನೀಡುವುದು)

## ಬಡ ಅರ್ಚಕರನ್ನು ಮದುವೆಯಾಗುವ ವಧುವಿಗೆ ನೀಡಲಾಗುವ ಬಾಂಡ್ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೪ (೯೮೪) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಡ ಅರ್ಚಕರನ್ನು ಮದುವೆ ಆಗುವ ವಧುವಿಗೆ ರೂ.೩ ಲಕ್ಷದ ಬಾಂಡ್ ಕೊಡುವುದಾಗಿ ಆದೇಶ ಹೊರಡಿಸಿದ್ದು, ಈ ಯೋಜನೆಯ ಫಲಾನುಭವಿಗಳ ಮಾನದಂಡಗಳೇನು, ಅರ್ಹತೆ ಏನು ;

(ಆ) ಈ ಯೋಜನೆಗಾಗಿ ಮೀಸಲಿಟ್ಟಿರುವ ಅನುದಾನ ಎಷ್ಟು ; ಈ ಯೋಜನೆ ಈಗಾಗಲೇ ಜಾರಿಯಾಗಿದೆಯೇ ;

(ಇ) ಈ ಯೋಜನೆಗಳ ಲಾಭ ಪಡೆಯಲು ಅಥವಾ ಇದಕ್ಕೆ ಅರ್ಜಿ ಸಲ್ಲಿಸಲು ಇರುವ ಮಾರ್ಗಸೂಚಿಗಳು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಈ) ಈ ಯೋಜನೆಗಳು ದುರುಪಯೋಗ ಆಗದಂತೆ ನೋಡಿಕೊಳ್ಳಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಮೀನುಗಾರಿಕೆಯನ್ನು ಉತ್ತೇಜಿಸಲು ಕೈಗೊಂಡ ಯೋಜನೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೫ (೯೮೫) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೀನುಗಾರಿಕೆಯನ್ನು ಉತ್ತೇಜಿಸಲು ಸರ್ಕಾರ ಕೈಗೊಂಡಿರುವ ಂಯೋಜನೆಗಳು ಂಯಾವುವು ; ಅವುಗಳಿಗೆ ಸಬ್ಸಿಡಿ ದೊರೆಯಲಿದೆಯೇ;

(ಆ) ಸಾಮಾನ್ಯ ರೈತರು ತಮ್ಮ ಕೃಷಿ ಹೊಂಡಗಳಲ್ಲಿ ಮೀನುಗಳನ್ನು ಉತ್ಪಾದಿಸಲು ಅವಕಾಶವಿದೆಯೇ ; ಹಾಗಾದರೆ, ಚಿಕ್ಕ–ಚಿಕ್ಕ ಮೀನುಗಳನ್ನು ರೈತರು ಪಡೆದುಕೊಳ್ಳುವುದು ಹೇಗೆ ;

(ಇ) ರೈತರು ಮೀನುಗಾರಿಕೆಗೆ ಸಂಬಂಧಿಸಿದ ಮಾಹಿತಿಯನ್ನು ಪಡೆಯುವುದು ಹೇಗೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಂಗಳೂರು ನಗರದಲ್ಲಿ ವಿವಿಧ ಯೋಜನೆಯಡಿ ಮಂಜೂರಾದ ಮನೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೬ (೯೯೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಬೆಂಗಳೂರು ನಗರ ಜಿಲ್ಲೆಯಲ್ಲಿ ವಿವಿಧ ವಸತಿ ಯೋಜನೆಗಳಡಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು;

(ಆ) ಈ ಸಾಲಿನಲ್ಲಿ ಮಂಜೂರಾದ ಎಷ್ಟು ಮನೆಗಳ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಿದೆ ; ಪ್ರಗತಿಯಲ್ಲಿರುವ ಮನೆಗಳ ಸಂಖ್ಯೆ ಎಷ್ಟು ;

(ಇ) ಮಂಜೂರಾದ ಮನೆಗಳ ನಿರ್ಮಾಣವನ್ನು ಎಷ್ಟು ಕಾಲಮಿತಿಯೊಳಗೆ ಸರ್ಕಾರ ಪೂರ್ಣಗೊಳಿಸಲಾಗುವುದು ;

(ಈ) ವಿವಿಧ ಯೋಜನೆಯಡಿ ಮನೆಗಳು ಮಂಜೂರಾಗಿದ್ದರೂ, ಫಲಾನುಭವಿಗಳೇ ತಮ್ಮ ಸ್ವಂತ ಹಣದಲ್ಲಿ ಮನೆಗಳನ್ನು ನಿರ್ಮಿಸುತ್ತಿದ್ದು, ಸರಿಯಾದ ಸಮಯಕ್ಕೆ ಕಂತಿನ ಹಣ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕಂತಿನ ಹಣವನ್ನು ಬಿಡುಗಡೆ ಮಾಡಲಾಗುವುದು ?

## ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಕ್ಕೆ ನೀಡಿದ ಅನುದಾನ ದುರುಪಯೋಗವಾಗಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೭ (೯೮೬) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಕ್ಕೆ ಸರ್ಕಾರದಿಂದ ನೀಡಲಾಗಿದ್ದ ಅನುದಾನವನ್ನು ಚಿಂತಾಮಣಿ ತಾಲ್ಲೂಕಿನ ಅಧಿಕಾರಿಗಳು ದುರುಪಯೋಗಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ತನಿಖೆ ನಡೆಸಿದೆಯೇ ;

(ಇ) ತನಿಖೆ ನಂತರ ಅಕ್ರಮ ಸಾಬೀತು ಆಗಿದ್ದಲ್ಲಿ, ಅಲ್ಲಿನ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

# ಗೋ ಹತ್ಯೆ ನಿಷೇಧ ಕಾಯ್ದೆಯಿಂದಾಗಿ ಜಾನುವಾರುಗಳನ್ನು ಖರೀದಿಸಲು ಹಿಂದೇಟು ಹಾಕುತ್ತಿರುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೮ (೯೮೩) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಗೋ ಹತ್ಯೆ ನಿಷೇಧ ಕಾಯ್ದೆಯಿಂದಾಗಿ ಸಂತೆಗಳಲ್ಲಿ ಜಾನುವಾರುಗಳನ್ನು ರೈತರಿಂದ ಕೊಂಡುಕೊಳ್ಳಲು ಯಾರು ಮುಂದೆ ಬಾರದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರೈತರು ಜಾನುವಾರುಗಳನ್ನು ಸಾಕಲು ಆಗದೇ ಮಾರಲು ಆಗದೇ ಅತಂತ್ರ ಸ್ಥಿತಿಯಲ್ಲಿದ್ದು, ತಮ್ಮ ಅಳಲು ತೋಡಿಕೊಂಡಿದ್ದು ಇದಕ್ಕೆ ಸೂಕ್ತ ಪರಿಹಾರ ಒದಗಿಸುವಂತೆ ಪ್ರತಿಭಟಿಸಿರುವ ಸಂಗತಿಯು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ವಯಸ್ಸಿನ ಮಿತಿ ಮೀರಿದ ಜಾನುವಾರುಗಳ ಪಾಲನೆಗೆ ಸರ್ಕಾರ ಯಾವುದಾದರೂ ಕೇಂದ್ರವನ್ನು ಸ್ಥಾಪಿಸಿದೆಯೇ ; ಸ್ಥಾಪಿಸಿದ್ದಲ್ಲಿ, ಅದರ ಸಂಪೂರ್ಣ ವಿವರ ನೀಡುವುದು ;

(ಈ) ಇಲ್ಲವಾದ್ದಲ್ಲಿ, ರೈತರ ಈ ಸಂಕಷ್ಟಕ್ಕೆ ಯಾವ ರೀತಿಯ ಯೋಜನೆಯನ್ನು ರೂಪಿಸಲಾಗಿದೆ ;

(ಉ) ರಾಜ್ಯದಲ್ಲಿ ಹಿಂದಿನಿಂದ ಇರುವ ಗೋ–ಶಾಲೆಗಳು ಮತ್ತು ಹೊಸದಾಗಿ ಆರಂಭವಾಗಿರುವ ಗೋ–ಶಾಲೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

# ಭೂಸ್ವಾಧೀನದ ಬಾಬ್ತು ಕೋರ್ಟಿನಲ್ಲಿ ಠೇವಣಿ ಮಾಡುತ್ತಿರುವ ಪ್ರಕರಣಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೮೯ (೧೦೫೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ಇಲಾಖೆಯು ವಾರಾಹಿ ನೀರಾವರಿ ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಗೆ ಸಂಬಂಧಿಸಿದಂತೆ ಖಾತೆದಾರರು ಭೂಸ್ವಾಧೀನದ ಬಾಬ್ತು ಪರಿಹಾರಧನ ಪಡೆಯದೇ ಇರುವ ಸಂದರ್ಭದಲ್ಲಿ ಕೋರ್ಟಿನಲ್ಲಿ ಠೇವಣಿ ಮಾಡಿರುವಂತಹ ಪ್ರಕರಣಗಳೆಷ್ಟು ; ಅವು ಯಾವುವು ; ಪರಿಹಾರ ಧನವನ್ನು ಪಡೆಯದೇ ಇರಲು ಕಾರಣವೇನು ; (ವರ್ಷವಾರು, ಗ್ರಾಮವಾರು, ಖಾತೆದಾರರ ಹೆಸರು ವಿಳಾಸ, ಪರಿಹಾರಧನ ಮೊತ್ತದೊಂದಿಗೆ ಮಾಹಿತಿ ನೀಡುವುದು)

(ಆ) ಭೂಮಿಯ ಹಕ್ಕುಸ್ವಾಮ್ಯತೆಯ ಕುರಿತು ಟೈಟಲ್ ಸರಿ ಇಲ್ಲದೇ ಇರುವವರು ಕೋರ್ಟ್ ಆದೇಶದೊಂದಿಗೆ ಪರಿಹಾರಧನದ ಹಕ್ಕು (claim) ಸಲ್ಲಿಸಿದಾಗ, ಬಡ್ಡಿ ಸಹಿತವಾಗಿ ಪರಿಹಾರವನ್ನು ನೀಡಲಾಗುವುದೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಈ ಪರಿಹಾರ ಧನವನ್ನು ಕೋರ್ಟಿನಲ್ಲಿ ಠೇವಣಿ ಮಾಡುವ ಬದಲು ಬ್ಯಾಂಕಿನಲ್ಲಿ ಠೇವಣಿ ಮಾಡಿದಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಬಡ್ಡಿ ಮೊತ್ತವು ದೊರಕುವಂತೆ ಮಾಡುವುದು ನ್ಯಾಯಯುತವಲ್ಲವೇ ; ಮುಂದೆ ಈ ರೀತಿ ಮಾಡಲಾಗುವುದೇ ; ಇಲ್ಲದಿದ್ದಲ್ಲಿ ಕಾರಣವೇನು ?

## ಉಡುಪಿ ಜಿಲ್ಲೆಯ ಮಂಜೂರಾತಿಯಾಗಿರುವ ಮಿನಿ ವಿಧಾನಸೌಧ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೦ (೧೦೫೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ತಾಲ್ಲೂಕುಗಳಿಗೆ ಮಂಜೂರಾತಿಯಾಗಿರುವ ಮಿನಿ ವಿಧಾನಸೌಧಗಳೆಷ್ಟು ; ಅವು ಯಾವುವು ; ಅವುಗಳಲ್ಲಿ ನಿರ್ಮಾಣಗೊಂಡಿರುವ ನಿರ್ಮಾಣಕ್ಕೆ ಬಾಕಿಯಿರುವ ಮಿನಿ ವಿಧಾನಸೌಧಗಳೆಷ್ಟು ; ಅವು ಯಾವುವು ; ನಿರ್ಮಾಣಗೊಂಡ ಮಿನಿ ವಿಧಾನಸೌಧ ಯಾವಾಗ ಉದ್ಘಾಟನೆಯಗಿದೆ ; ಯಾವಾಗ ಹಸ್ತಾಂತರವಾಗಿದೆ ; ಈ ಕಟ್ಟಡಗಳ ನಿರ್ಮಾಣ ವೆಚ್ಚ ಎಷ್ಟು ಹಾಗೂ ಗುತ್ತಿಗೆದಾರರು ಯಾರು ; (ತಾಲ್ಲೂಕುವಾರು, ಕಟ್ಟಡವಾರು ಮಾಹಿತಿ ನೀಡುವುದು)

(ಆ) ಉದ್ಘಾಟನೆಯಾದ ಮಿನಿ ವಿಧಾನ ಸೌಧಗಳಲ್ಲಿ ಯಾವ ಯಾವ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ ; ಅವು ಯಾವುವು ; ಬರಲು ಬಾಕಿಯಿರಲು ಇಲಾಖೆಗಳು ಯಾವುವು ;

(ಇ) ಉಡುಪಿ ಜಿಲ್ಲೆಯ ವಿವಿಧ ಇಲಾಖೆಗಳಿಂದ ಸ್ವಂತ ಕಟ್ಟಡ / ಕಛೇರಿಗೆ ಬೇಡಿಕೆಯಿರುವ ಪ್ರಕರಣಗಳು ಯಾವುವು ; ಸಣ್ಣ ನೀರಾವಾರಿ ಇಲಾಖೆಯಿಂದ ಸ್ವಂತ ಕಟ್ಟಡ / ಕಛೇರಿಗೆ ಬೇಡಿಕೆ ಬಂದಿದೆಯೇ ; ಬಂದಿದ್ದಲ್ಲಿ, ನೀಡದೇ ಇರಲು ಕಾರಣವೇನು ?

## ಎಸ್.ಸಿ.ಪಿ/ಟಿ.ಎಸ್.ಪಿ ರಡಿ ಮಂಜೂರಾತಿಯಾಗಿರುವ ಕಾಮಗಾರಿಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೧ (೧೦೫೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ವಿವಿಧ ಇಲಾಖೆಗಳ ಎಸ್.ಸಿ.ಪಿ/ಟಿ.ಎಸ್.ಪಿ ರಡಿ ಮಂಜೂರಾತಿಯಾದ ಕಾಮಗಾರಿಗಳು ಯಾವುವು ; ಅವುಗಳನ್ನು ನಿರ್ವಹಿಸಿದ ಏಜೆನ್ಸಿಗಳು ಯಾವುವು ; (ವರ್ಷವಾರು, ತಾಲ್ಲೂಕುವಾರು, ಗ್ರಾಮವಾರು, ಗುತ್ತಿಗೆದಾರರ ಹೆಸರು ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಆ) ಈ ಕಾಮಗಾರಿಗಳನ್ನು ಕಳಪೆಯಾಗಿ ನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳಪೆ ಕಾಮಗಾರಿ ತಡೆಗಟ್ಟಲು ಸರ್ಕಾರ ತೆಗೆದಕೊಂಡಿರುವ ಕ್ರಮಗಳಾವುವು ;

(ಇ) ಕಾಮಗಾರಿಗಳನ್ನು ಕಳಪೆಯಾಗಿ ನಿರ್ವಹಿಸಿದ ಬಗ್ಗೆ ದೂರುಗಳು ಬಂದಿದೆಯೇ ; ದೂರಿನ ಬಗ್ಗೆ ತನಿಖೆ ನಡೆಸಿ ತಪ್ಪಿತಸ್ಥ ಏಜೆನ್ಸಿಯ ಅಧಿಕಾರಿ ಗುತ್ತಿಗೆದಾರರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗಿದೆಯೇ ; ಇಲ್ಲವಾದಲ್ಲಿ, ಕಾರಣವೇನು ?

## ಸೌಡ ಶಂಕರನಾರಾಯಣ ಸಂಪರ್ಕ ಸೇತುವೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೨ (೧೦೫೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಹಾರ್ದಳ್ಳಿಮಂಡಳ್ಳಿ ಗ್ರಾಮದಲ್ಲಿ ವಾರಾಹಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿದ ಸೌಡ ಶಂಕರನಾರಾಯಣ ಸಂಪರ್ಕ ಸೇತುವೆ ಯಾವಾಗ ಮಂಜೂರಾತಿಯಾಗಿರುತ್ತದೆ ; ಅದರ ಅಂದಾಜು ಮೊತ್ತವೆಷ್ಟು ;

(ಆ) ಈ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಯಾವ ಹಂತದಲ್ಲಿರುತ್ತದೆ ; (ಅಂದಾಜು ಪಟ್ಟಿ ಪ್ರತಿ ಒದಗಿಸುವುದು)

(ಇ) ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲಾಗುವುದು ?

## ಅಲ್ಬಾಡಿ ಗ್ರಾಮದ ಆರ್ಡಿಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಆಶ್ರಮಶಾಲೆಯ ನಿರ್ವಹಣೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೩ (೧೦೫೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ಬಳಕೆಯಲ್ಲಿಲ್ಲದ ಹಾಸ್ಟೆಲ್ ವಸತಿಶಾಲೆಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಉಡುಪಿ ಜಿಲ್ಲೆ ಹೆಬ್ರಿ ತಾಲ್ಲೂಕಿನ ಅಲ್ಬಾಡಿ ಗ್ರಾಮದ ಆರ್ಡಿಯಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ಆಶ್ರಮ ಶಾಲೆಯನ್ನು ಯಾವಾಗ ಪ್ರಾರಂಭಿಸಲಾಯಿತು ; ಇಲ್ಲಿಯವರೆಗೆ ಆ ಶಾಲೆಗೆ ಯಾವ ಯಾವ ಉದ್ದೇಶಗಳಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಎಷ್ಟು ವೆಚ್ಚ ಮಾಡಲಾಗಿದೆ ; (ವರ್ಷವಾರು ಮಾಹಿತಿ ನೀಡುವುದು) ಈ ಶಾಲೆಯನ್ನು ಯಾವಾಗ ಮುಚ್ಚಲಾಯಿತು ; ಯಾವ ಕಾರಣಕ್ಕಾಗಿ ಮುಚ್ಚಲಾಯಿತು ;

(ಇ) ಸದರಿ ಶಾಲೆ ಮುಚ್ಚಿದ ನಂತರ ಶಾಲೆಯ ನಿರ್ವಹಣೆಯನ್ನು ಇಲಾಖೆ ವತಿಯಿಂದ ಮಾಡಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ; ಸದರಿ ಶಾಲೆಯನ್ನು ಬೇರೆ ಉದ್ದೇಶಕ್ಕೆ ಬಳಸಲು ಇತರೆ ಇಲಾಖೆಗೆ ಹಸ್ತಾಂತರ ಮಾಡಲಾಗಿದೆಯೇ ?

## ನೈಸ್ ರಸ್ತೆಯ ಫಾಸ್ಟ್ ಸ್ಟ್ಯಾಗ್ ಅಳವಡಿಕೆ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೭೯೪ (೧೦೦೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ನೈಸ್ ರಸ್ತೆಯಲ್ಲಿ ಫಾಸ್ಟ್ ಸ್ಟ್ಯಾಗ್ ಅಳವಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಲಿ ನೈಸ್ ರಸ್ತೆಯಲ್ಲಿ ಪ್ರತಿ ದಿನ ಒಂದು ಲಕ್ಷದಷ್ಟು ವಾಹನಗಳು ಸಂಚರಿಸುತ್ತಿದ್ದು, ಕೋವಿಡ್–೧೯ ಸಂದರ್ಭದಲ್ಲಿ ಹಣದ ವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಲ್ಲಿ ಫಾಸ್ಟ್ ಸ್ಟ್ಯಾಗ್ ಕಡ್ಡಾಯಗೊಳಿಸಿದ್ದು, ನೈಸ್ ರಸ್ತೆಗೆ ಫಾಸ್ಟ್ ಸ್ಟ್ಯಾಗ್ ವ್ಯವಸ್ಥೆಯನ್ನು ಜಾರಿಗೊಳಿಸಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ ?

## ರಸ್ತೆ ಟೋಲ್ ಶುಲ್ಕಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೭೯೫ (೧೦೦೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಯಾವ ಯಾವ ರಸ್ತೆಗಳಲ್ಲಿ ಟೋಲ್ ಶುಲ್ಕ ಪಡೆಯಲಾಗುತ್ತಿದೆ ; (ಟೋಲ್ ಶುಲ್ಕ ಹಾಗು ಗುತ್ತಿಗೆ ಪಡೆದವರ ವಿವರ ನೀಡುವುದು)

(ಆ) ಟೋಲ್ ಶುಲ್ಕದ ಅವಧಿ ಎಲ್ಲಿಯವರೆಗೆ ಇದೆ ? (ವಿವರ ನೀಡುವುದು)

## ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಮಂಜೂರಾದ ಅನುದಾನಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೭೯೬ (೧೦೦೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮ ರಿಂದ ೨೦೨೦ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆಗೆ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆ ಅಡಿಯಲ್ಲಿ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಕಾಮಗಾರಿಗಳಿಗೆ ಅನುಮೋದನೆ ನೀಡಿದ್ದರೂ, ಹಣ ಮಂಜೂರು ಮಾಡದಿರಲು ಕಾರಣಗಳೇನು ; ಎಷ್ಟು ಕಾಮಗಾರಿಗಳಿಗೆ ಹಣ ಮಂಜೂರು ಆಗಿರುವುದಿಲ್ಲ ? (ತಾಲ್ಲೂಕುವಾರು ವಿವರ ನೀಡುವುದು)

## ಜಾತಿವಾರು ಅಭಿವೃದ್ಧಿ ನಿಗಮಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೭೯೭ (೧೦೦೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಜಾತಿವಾರು ಅಭಿವೃದ್ಧಿ ನಿಗಮಗಳ ಸಂಖ್ಯೆ ಎಷ್ಟು;

(ಆ) ಕಳೆದ ೩ ವರ್ಷದಿಂದ ಪ್ರತಿ ಅಭಿವೃದ್ಧಿ ನಿಗಮಕ್ಕೆ ನೀಡಿದ ಅನುದಾನ ಎಷ್ಟು ; ಯಾವ ಯಾವ ಯೋಜನೆಗಳಿಗೆ ಉಪಯೋಗಿಸಲಾಗಿದೆ ; (ವಿವರ ನೀಡುವುದು)

(ಇ) ನೀಡಿರುವ ಅನುದಾನದಲ್ಲಿ ಖರ್ಚಾದ ಹಣ ಹಾಗೂ ಬಾಕಿ ಉಳಿದ ಹಣ ಎಷ್ಟು? (ವಿವರ ನೀಡುವುದು)

## ಜಾಲ್ ಸಮೀಕ್ಷೆ ವರದಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೭೯೮ (೧೦೦೪) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಜಾಲ್ ಸಮೀಕ್ಷೆ ನಡೆಸಲು ಖರ್ಚಾದ ಹಣವೆಷ್ಟು; ಜಾಲ್ ಸಮೀಕ್ಷೆ ವರದಿಯನ್ನು ಬಹಿರಂಗಗೊಳಿಸುವುದು ಅಥವಾ ಬಿಡುಗಡೆಗೊಳಿಸುವುದು ಯಾವಾಗ ;

(ಆ) ಲಿಂಗಾಯುತ ಸಮುದಾಯಕ್ಕೆ ಒಳಪಡುವ ಉಪಜಾತಿಗಳು/ ಒಳಪಂಗಡಗಳು ಎಷ್ಟು ; ಅವುಗಳು ಯಾವುವು ; (ಪಟ್ಟಿ ನೀಡುವುದು)

(ಇ) ವೀರಶೈವ ಸಮುದಾಯಕ್ಕೆ ಒಳಪಡುವ ಉಪಜಾತಿಗಳು/ ಒಳಪಂಗಡಗಳು ಎಷ್ಟು ; ಅವುಗಳು ಯಾವುವು ; (ಪಟ್ಟಿ ನೀಡುವುದು)

(ಈ) ಒಕ್ಕಲಿಗ ಸಮುದಾಯಕ್ಕೆ ಒಳಪಡುವ ಉಪಜಾತಿಗಳು/ ಒಳಪಂಗಡಗಳು ಎಷ್ಟು ; ಅವುಗಳು ಯಾವುವು ; (ಪಟ್ಟಿ ನೀಡುವುದು)

(ಉ) ಕುರುಬ ಸಮುದಾಯಕ್ಕೆ ಒಳಪಡುವ ಉಪಜಾತಿಗಳು/ ಒಳಪಂಗಡಗಳು ಎಷ್ಟು ; ಅವುಗಳು ಯಾವುವು ; (ಪಟ್ಟಿ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ ವಿತರಿಸುವ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೭೯೯ (೯೯೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಡಾ: ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಯಾವ ಯಾವ ಉದ್ದೇಶಕ್ಕಾಗಿ ಸಾಲವನ್ನು ವಿತರಿಸಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಶಿವಮೊಗ್ಗ ಜಿಲ್ಲೆಯಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಕೊರೆದಿರುವ ಬಾವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಗಂಗಾ ಕಲ್ಯಾಣ ಯೋಜನೆಯಡಿ ಖರ್ಚಾದ ಅನುದಾನವೆಷ್ಟು; ಬಾಕಿ ಉಳಿದಿರುವ ಹಣವೆಷ್ಟು ಬಾಕಿ ಉಳಿದಿದ್ದಲ್ಲಿ, ಯಾವ ಕಾರಣಕ್ಕಾಗಿ ಬಾಕಿ ಉಳಿದಿದೆ ?

## ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಬಡವರಿಗಾಗಿ ಸೂರು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಯೋಜನೆಗಳ ಬಗ್ಗೆ

**ಶ್ರೀ ಆರ್. ಪ್ರಸನ್ನಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೦೦ (೯೯೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ಬಡವರಿಗಾಗಿ ಸೂರು ಕಲ್ಪಿಸಲು ಸರ್ಕಾರದ ಯಾವ ಯಾವ ವಸತಿ ಯೋಜನೆಗಳು ಪ್ರಸ್ತುತ ಜಾರಿಯಲ್ಲಿವೆ ; (ವಿವರ ನೀಡುವುದು)

(ಆ) ಶಿವಮೊಗ್ಗ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ಪ್ರಸ್ತುತ ಯಾವ ಯಾವ ಯೋಜನೆಯಡಿ ವಸತಿ ಸೌಲಭ್ಯ ಕಲ್ಪಿಸಿಕೊಡಲಾಗಿದೆ ;

(ಇ) ಗ್ರಾಮೀಣ ಪ್ರದೇಶದಲ್ಲಿ ಫಲಾನುಭವಿಗಳಿಗೆ ನೀಡಲಾಗುತ್ತಿರುವ ಸಹಾಯ ಧನದ ಮೊತ್ತವೆಷ್ಟು ; ಹಾಗೂ ಈ ಸಹಾಯಧನವನ್ನು ಯಾವ ಆಧಾರದ ಮೇಲೆ ನೀಡಲಾಗಿದೆ ?

## ದೇವಸ್ಥಾನಗಳ ಜೀರ್ಣೋದ್ಧಾರದ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೮೦೧ (೯೧೩) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಮುಜರಾಯಿ ವ್ಯಾಪ್ತಿಗೆ ಬರುವ ದೇವಸ್ಥಾನಗಳ ಸಂಖ್ಯೆ ಎಷ್ಟು (ದೇವಸ್ಥಾನಗಳವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಿಂದ ಬೀದರ್ ಜಿಲ್ಲೆಯಲ್ಲಿನ ಮುಜರಾಯಿ ದೇವಸ್ಥಾನಗಳ ಅಭಿವೃದ್ಧಿಗಾಗಿ ನೀಡಿರುವ ಅನುದಾನ ಎಷ್ಟು ;

(ವರ್ಷವಾರು ದೇವಸ್ಥಾನವಾರು ತಾಲ್ಲೂಕುವಾರು ಅನುದಾನದ ಮಾಹಿತಿ ಒದಗಿಸುವುದು)

(ಇ) ಮುಜರಾಯಿ ವ್ಯಾಪ್ತಿಗೊಳಪಡುವ ದೇವಸ್ಥಾನಗಳಿಗೆ ಜೀರ್ಣೋದ್ಧಾರ ಮತ್ತು ಅಭಿವೃದ್ಧಿಗಾಗಿ ಬಿಡುಗಡೆಯಾದ ಅನುದಾನ ಎಷ್ಟು ; ಇವುಗಳಲ್ಲಿ ಎಷ್ಟು ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ; ಎಷ್ಟು ಕಾಮಗಾರಿಗಳು ಬಾಕಿ ಇದೇ? (ಕಾಮಗಾರಿ ನಿರ್ವಹಿಸುತ್ತಿರುವ ಗುತ್ತಿಗೆದಾರರ ಸಂಪೂರ್ಣ ಮಾಹಿತಿ ನೀಡುವುದು)

## ನಿರ್ಮಿತಿ ಕೇಂದ್ರದ ಅನುದಾನ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೨ (೯೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲಾ ವಿಧಾನ ಸಭಾ ಕ್ಷೇತ್ರಗಳಲ್ಲಿ ನಿರ್ಮಿತಿ ಕೇಂದ್ರದ ಯೋಜನೆಯಲ್ಲಿ ಎಷ್ಟು ಅನುದಾನ ನೀಡಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಈವರೆಗೂ ಪೂರ್ಣಗೊಂಡಿರುವ ಹಾಗೂ ಅಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; (ಕಾಮಗಾರಿವಾರು, ವರ್ಷವಾರು, ಗುತ್ತಿಗೆದಾರರ ಸಂಪೂರ್ಣ ವಿವರ ನೀಡುವುದು)

(ಇ) ಈ ವಿಧಾನ ಸಭಾ ಕ್ಷೇತ್ರಗಳಲ್ಲಿ ಅಪೂರ್ಣಗೊಂಡಿರುವ ಕಾಮಗಾರಿಗಳಿಗೆ ಅನುದಾನ ನೀಡುವ ಪ್ರಸ್ತಾವನೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅನುದಾನ ನೀಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ ? (ವಿವರ ಒದಗಿಸುವುದು)

# ಬೀದರ್ ಜಿಲ್ಲೆಯ ನೂತನ ತಾಲ್ಲೂಕಿಗೆ ಮೂಲಭೂತ ಸೌಕರ್ಯಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦೩ (೯೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕಮಲನಗರ, ಹುಲಸೂರು, ಚಿಟ್ಟಗುಪ್ಪಾ, ಹೊಸ ತಾಲ್ಲೂಕಿಗೆ ಮೂಲಭೂತ ಸೌಕರ್ಯಗಳಾದ ತಹಶೀಲ್ದಾರ್ ಕಾರ್ಯಾಲಯು ಉಪ ನೋಂದಣಿ ಕಾರ್ಯಾಲಯ, ಪೊಲೀಸ್ ಠಾಣೆ, ಬಸ್ ಡಿಪೋ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಸಂಚಾರಿ ನ್ಯಾಯಾಲಯಗಳನ್ನು ಹಾಗೂ ತಾಲ್ಲೂಕು ಮಟ್ಟದ ಕಾರ್ಯಾಲಯಗಳನ್ನು ತಕ್ಷಣ ಮಂಜೂರು ಮಾಡುವ ಪ್ರಸ್ತಾವನೆಗಳು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಸದರಿ ಸೌಲಭ್ಯಗಳ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; ಕ್ರಮ ಕೈಗೊಂಡಲ್ಲಿ ಯಾವ ಕಾಲಮಿತಿಯೊಳಗೆ ಕಾರ್ಯಾಲಯಗಳನ್ನು ಅನುಷ್ಠಾನಗೊಳಿಸಲಾಗುವುದು ; (ಮಾಹಿತಿ ನೀಡುವುದು)

(ಇ) ಸದರಿ ನೂತನ ತಾಲ್ಲೂಕಿಗೆ ಎಲ್ಲಾ ಇಲಾಖಾ ಕಛೇರಿಗಳಿಗೆ ಸ್ಥಳ ಗುರುತಿಸಲಾಗಿದೆಯೇ ; ಹಾಗಿದ್ದಲ್ಲಿ ಸರ್ಕಾರ ಯಾವ ಕಾಲಮಿತಿಯೊಳಗೆ ಮುಂದಿನ ಕ್ರಮ ಕೈಗೊಳ್ಳುವುದು ? (ಮಾಹಿತಿ ಒದಗಿಸುವುದು)

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯಗಳ ಬೇಡಿಕೆ ಕುರಿತು.

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೦೪ (೮೯೭) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯದ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೊಸದಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ಬೇಡಿಕೆ ಎಷ್ಟಿದೆ ;

(ಆ) ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ನಿರ್ವಹಣೆ ಹಾಗೂ ಸ್ಥಿತಿಗತಿಗಳೇನು ; (ಮಾಹಿತಿ ನೀಡುವುದು)

(ಇ) ತುಮಕೂರು ಜಿಲ್ಲೆಯ ಗಣಿಬಾಧಿತ ಪ್ರದೇಶಗಳ ಹಿಂದುಳಿದ ವರ್ಗಗಳ ಜನ ಕಲ್ಯಾಣಕ್ಕಾಗಿ ಸರ್ಕಾರ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ ; (ಮಾಹಿತಿ ನೀಡುವುದು)

(ಈ) ರಾಜ್ಯದ ವಿವಿಧ ಭಾಗಗಳ ಹಿಂದುಳಿದ ವರ್ಗಗಳ ಜನ ಕಲ್ಯಾಣಕ್ಕಾಗಿ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು; (ಮಾಹಿತಿ ನೀಡುವುದು)

(ಉ) ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಡಿಯಲ್ಲಿ ಚೈತನ್ಯ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯಲ್ಲಿ ನೆರವು ಪಡೆದ ಫಲಾನುಭವಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ರಾಜ್ಯದಲ್ಲಿನ ವಸತಿ ಯೋಜನೆಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೦೫ (೯೦೧) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಯೋಜನೆಗಳ ಮೂಲಕ ಬಡವರಿಗೆ ಮನೆಗಳನ್ನು ಹಂಚುವ ಕಾರ್ಯಕ್ರಮ ರೂಪಿಸಲಾಗಿದೆ ; (ವಿವರ ನೀಡುವುದು)

(ಆ) ಕಳೆದ ಎರಡು ವರ್ಷಗಳಿಂದ ನಿರ್ಮಾಣವಾಗದೇ ಉಳಿದಿರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಅಂತಿಮ ಗಡುವು ನಿಗದಿಪಡಿಸಿದೆಯೇ ;

(ಇ) ವಸತಿ ಇಲಾಖೆಯಡಿ ನಿರ್ಮಾಣವಾಗುವ ಮನೆಗಳ ಗುಣಮಟ್ಟದ ಕುರಿತು ಪ್ರಶ್ನೆಗಳು ಎದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಕಳಪೆ ಗುಣಮಟ್ಟದ ಮನೆಗಳನ್ನು ನಿರ್ಮಿಸಿದರೆ ಸಂಬಂಧಪಟ್ಟ ಗುತ್ತಿಗೆದಾರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುತ್ತದೆ ?

## ರಾಜ್ಯದಲ್ಲಿ ಒತ್ತುವರಿಯಾದ ಗೋಮಾಳಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೦೬ (೮೯೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈವರೆಗೆ ಒತ್ತುವರಿಯಾಗಿರುವ ಗೋಮಾಳಗಳ ಸಂಖ್ಯೆ ಎಷ್ಟು ; ಒತ್ತುವರಿಯಾದ ಗೋಮಾಳಗಳನ್ನು ಸರ್ಕಾರ ಹಿಂಪಡೆದಿದೆಯೇ ; ಒತ್ತುವರಿದಾರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಆ) ರಾಜ್ಯದ ಬಹುತೇಕ ತಾಲ್ಲೂಕು ಕಛೇರಿಗಳಲ್ಲಿ ರೈತರು ಆರ್.ಟಿ.ಸಿ.ಯಲ್ಲಿ ಬೆಳೆ ನೋಂದಾವಣಿ, ಪಹಣಿ ನೋಂದಾವಣಿ ಮುಂತಾದ ಕೆಲಸಗಳು ಸುಸೂತ್ರವಾಗಿ ಆಗುತ್ತಿಲ್ಲ ಎನ್ನುವ ದೂರುಗಳು ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ತಾಲ್ಲೂಕು ಕಛೇರಿಯ ಭೂಮಿ ಕೇಂದ್ರವನ್ನು ಖಾಸಗಿ ನಿರ್ವಹಣೆಗೆ ನೀಡಬೇಕೆನ್ನುವ ಆಗ್ರಹ ಕೇಳಿ ಬಂದಿರುವುದರ ಕುರಿತು ಸರ್ಕಾರದ ನಿಲುವೇನು ;

(ಈ) ತಾಲ್ಲೂಕು ಹೋಬಳಿ ಕೇಂದ್ರಗಳ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೆ ಕಾರ್ಯ ಸಮರ್ಪಕವಾಗಿ ನಡೆಯುತ್ತಿಲ್ಲ ಎನ್ನುವ ಆರೋಪಗಳು ಕೇಳಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸರ್ವೇ ಅಧಿಕಾರಿಗಳ ನೇಮಕಾತಿ ಪ್ರಕ್ರಿಯೆ ಪ್ರಸ್ತುತ ಯಾವ ಹಂತದಲ್ಲಿದೆ ?

## ರಸ್ತೆ ಕಾಮಗಾರಿಗಳು ನಿಧಾನಗತಿಯಲ್ಲಿ ಸಾಗುತ್ತಿರುವ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೮೦೭ (೯೦೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದಾದ್ಯಂತ ಬೃಹತ್ ಹೆದ್ದಾರಿಗಳ ನಿರ್ಮಾಣಕ್ಕಾಗಿ ಹಾಗೂ ಎಕ್ಸ್‌ಪ್ರೆಸ್ ಕಾರಿಡಾರ್ ನಿರ್ಮಾಣಕ್ಕಾಗಿ ಹಾಲಿ ಇರುವ ರಸ್ತೆಗಳನ್ನು ಅಗೆದಿದ್ದು, ಕಾಮಗಾರಿ ನಿಧಾನಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಶೀಘ್ರವಾಗಿ ರಸ್ತೆ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ;

(ಇ) ಬೆಂಗಳೂರು-ಪೂನಾ ರಾಷ್ಟ್ರೀಯ ಹೆದ್ದಾರಿ ಎನ್.ಹೆಚ್-೪ ಬಂಕಾಪುರದಿಂದ ಹಾವೇರಿಯವರೆಗೆ ರಸ್ತೆ ಕಾಮಗಾರಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬೆಂಗಳೂರು-ಮಂಗಳೂರು ಹೆದ್ದಾರಿಯಲ್ಲಿ ಹಾಸನದಿಂದ ಸಕಲೇಶಪುರ ಮಾರ್ಗ ಕಳೆದ ಎರಡು ವರ್ಷಗಳಿಂದ ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಶೀಘ್ರ ಕಾಮಗಾರಿ ಪೂರ್ಣಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಈ ಎರಡೂ ಯೋಜನೆಗಳನ್ನು ಪೂರ್ಣಗೊಳಿಸಲು ಅಂತಿಮ ಗಡುವು ನೀಡಲಾಗಿದೆಯೇ ? (ಮಾಹಿತಿ ನೀಡುವುದು)

## ದೇವಸ್ಥಾನಗಳ ಉಂಬಳ ಭೂಮಿಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):-**

೮೦೮ (೯೬೨) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೇವಸ್ಥಾನಗಳ ಉಂಬಳ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದೆ ಮಾರಾಟ ಮಾಡಿರುವ ಪ್ರಕರಣಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ದೇವಸ್ಥಾನಗಳ ಉಂಬಳ ಭೂಮಿಯನ್ನು ಭೂ ಸುಧಾರಣಾ ಕಾಯ್ದೆಯ ಅನ್ವಯ ಪಡೆದುಕೊಂಡು ಕೃಷಿ ಚಟುವಟಿಕೆ ನಡೆಸದಿರುವ ಭೂಮಿಯನ್ನು ಹಿಂಪಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ದೇವಸ್ಥಾನಗಳ ಉಂಬಳ ಭೂಮಿಯನ್ನು ಅನ್ಯ ಮತೀಯರು ಖರೀದಿಸಿ ದೇವಸ್ಥಾನ ಸ್ಥಳದ ಸಮೀಪವೇ ಅವರ ಪ್ರಾರ್ಥನಾ ಸ್ಥಳಗಳನ್ನು ನಿರ್ಮಿಸಿರುವ ಪ್ರಕರಣಗಳು ವರದಿಯಾಗಿರುವುದು ಎಷ್ಟು ;

(ಈ) ಒಂದು ಬಾರಿ ದೇವಸ್ಥಾನದ ಭೂಮಿ ಎಂದು ಪರಿಗಣಿಸಿದ ಬಳಿಕ ಅದು ಯಾವುದೇ ಕಾಲದಲ್ಲೂ ದೇವಸ್ಥಾನದ ಭೂಮಿಯೇ ಆಗಿರುವಂತೆ ಮಾಡಲು ಯಾವ ಕಾನೂನು ಕ್ರಮ ಕೈಗೊಳ್ಳಲಾಗಿದೆ ;

(ಉ) ಈ ಕುರಿತು ಹೊಸ ಕಾನೂನು ಜಾರಿಗೆ ತರಲು ಸರ್ಕಾರ ಚಿಂತನೆ ನಡೆಸಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ?

## ರಾಜ್ಯ ಹೆದ್ದಾರಿಗಳ ಅಭಿವೃದ್ಧಿಗೆ ಮಾಡಿರುವ ವೆಚ್ಚದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೮೦೯ (೮೯೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಕಳೆದ ೫ ವರ್ಷಗಳಲ್ಲಿ ರಾಜ್ಯ ಹೆದ್ದಾರಿಗಳ ಅಭಿವೃದ್ಧಿಗೆ ಮಾಡಲಾದ ವೆಚ್ಚವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಹೆದ್ದಾರಿಗಳಲ್ಲಿನ ಹೊಂಡಗಳನ್ನು ಮುಚ್ಚಲು ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ರಾಜ್ಯ ಹೆದ್ದಾರಿಗಳ ಅಭಿವೃದ್ಧಿ ಮತ್ತು ನಿರ್ವಹಣೆಯನ್ನು ಮಾಡಿದ ಗುತ್ತಿಗೆದಾರರ ಮತ್ತು ಕಂಪನಿಗಳು ಯಾವುವು ? (ವಿವರ ನೀಡುವುದು)

## ಉಪ ನೋಂದಣಾಧಿಕಾರಿ ಕಛೇರಿಗಳು ಬ್ರೋಕರುಗಳ ಅಡ್ಡೆಯಾಗಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೮೧೦ (೮೯೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಆದಾಯದ ಮೂಲಗಳಲ್ಲಿ ಒಂದಾಗಿರುವ ಉಪ ನೋಂದಣಾಧಿಕಾರಿ ಕಛೇರಿಗಳು ಬ್ರೋಕರ್‌ಗಳ ಅಡ್ಡೆಯಾಗಿರುವ ಕುರಿತು ಸರ್ಕಾರದ ನಿಲುವೇನು ; ಈ ಕಛೇರಿಗಳಲ್ಲಿ ಲಂಚದ ಎಲ್ಲಾ ವ್ಯವಹಾರಗಳನ್ನು ಇವರೇ ನೋಡಿಕೊಳ್ಳುತ್ತಿದ್ದು ಈ ಬ್ರೋಕರ್‌ಗಳ ಹಾವಳಿ ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಉಪ ನೋಂದಣಾಧಿಕಾರಿ ಕಛೇರಿಗಳಲ್ಲಿ ಆಸ್ತಿ ದಾಖಲೆಗಳ ನೋಂದಣಿಗಾಗಿ ಸಾರ್ವಜನಿಕರು ತೆರಳಿದಾಗ ಸಾಮಾನ್ಯವಾಗಿ ಪ್ರತಿ ದಿನ ಸರ್ವರ್ ಡೌನ್ ಎಂಬ ಉತ್ತರ ನೀಡಿ ಸಾರ್ವಜನಿಕರನ್ನು ಕಳುಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ;

(ಇ) ಸರ್ವರ್ ಡೌನ್ ಎಂಬ ಕಾರಣ ನೀಡಿ ದಾಖಲೆಗಳನ್ನು ನೋಂದಣಿ ಮಾಡದೇ ತೊಂದರೆಯನ್ನುಂಟು ಮಾಡುವವರಿಂದಲೇ ಸರ್ಕಾರಕ್ಕೆ ಉಂಟಾದ ಆದಾಯ ನಷ್ಟವನ್ನು ಯಾರಿಂದ ವಸೂಲಿ ಮಾಡಲಾಗುವುದು ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಆಸ್ತಿಯ ಮಾರಾಟ ಮತ್ತು ಖರೀದಿಯನ್ನು ಆನ್ ಲೈನ್ ಮೂಲಕವೇ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಜಲಾಶಯಗಳಲ್ಲಿ ಮೀನು ಸಾಕಾಣಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೮೧೧ (೪೯೩) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಜಲಾಶಯಗಳಲ್ಲಿ ಮೀನು ಸಾಕಾಣಿಕೆಯನ್ನು ಮಾಡಲಾಗುತ್ತಿದೆ ; ಮೀನು ಸಾಕಾಣಿಕೆ ಮತ್ತು ಮೀನು ಹಿಡಿಯುವುದನ್ನು ಗುತ್ತಿಗೆ ನೀಡುವ ಕುರಿತು ಸರ್ಕಾರದ ನಿಲುವೇನು ;

(ಆ) ಜಲಾಶಯಗಳಲ್ಲಿ ಮೀನುಗಾರಿಕೆಯನ್ನು ಪ್ರೋತ್ಸಾಹಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಜಲಾಶಯಗಳಲ್ಲಿ ಮೀನುಗಾರಿಕೆಯನ್ನು ಗುತ್ತಿಗೆ ನೀಡಿದ್ದಲ್ಲಿ, ಸ್ಥಳೀಯ ಮೀನುಗಾರರಿಗೆ ಅನ್ಯಾಯವಾದಲ್ಲಿ ಯಾರು ಹೊಣೆ; ರಾಜ್ಯದ ಎಷ್ಟು ಜಲಾಶಯಗಳಲ್ಲಿ ಮೀನುಗಾರಿಕೆಯ ಗುತ್ತಿಗೆ ನೀಡಲಾಗಿದೆ ; ಇದರಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು ?

## ಪರಿಶಿಷ್ಟ ಪಂಗಡದವರ ಧರ್ಮದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧೨ (೪೯೪) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಪಂಗಡಕ್ಕೆ ಸೇರಿದವರು ಯಾವ ಯಾವ ಧರ್ಮದಲ್ಲಿದ್ದಾರೆ ; (ಧರ್ಮವಾರು ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಪರಿಶಿಷ್ಟ ಪಂಗಡದವರ ಜನ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಯಾವ ಯಾವ ಜಾತಿಯವರನ್ನು ಪರಿಶಿಷ್ಟ ಪಂಗಡ ಎಂದು ಗುರುತಿಸಲಾಗಿದೆ ; ಅವರು ಯಾವ ಧರ್ಮಕ್ಕೆ ಸೇರಿದ್ದಾರೆ ? (ಮಾಹಿತಿ ನೀಡುವುದು)

## ಕಂದಾಯ ನಿವೇಶನಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೮೧೩ (೧೦೨೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಂದಾಯ ನಿವೇಶನ ಎಂದರೇನು ; ಕಾನೂನಿನಲ್ಲಿ ಇವುಗಳ ಮಾನ್ಯತೆ ಏನು ; (ವಿವರವಾದ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಂದಾಯ ನಿವೇಶನಗಳ ನೋಂದಣಿಯನ್ನು ಸ್ಥಗಿತಗೊಳಿಸಿರುವುದು ನಿಜವೇ ; ಹಾಗಿದ್ದಲ್ಲಿ, ಸ್ಥಗಿತಗೊಳಿಸಲು ಕಾರಣಗಳೇನು ; ಇದರಿಂದ ಸಾವಿರಾರು ಜನರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಇ) ಸ್ಥಗಿತಗೊಳಿಸಿರುವ ಕಂದಾಯ ನಿವೇಶನಗಳ ನೋಂದಣಿಯನ್ನು ಎಂದಿನಿಂದ ಪ್ರಾರಂಭಿಸಲಾಗುವುದು ;

(ಈ) ಕಂದಾಯ ನಿವೇಶನಗಳನ್ನು ನೋಂದಣಿ ಮಾಡಿಸಲು ಇರುವ ಮಾರ್ಗಸೂಚಿ ಹಾಗೂ ಷರತ್ತುಗಳೇನು ?

## ಉಪ ನೋಂದಣಿ ಕಛೇರಿಗಳಲ್ಲಿ ಆಸ್ತಿ ನೋಂದಣಿ ವಿಳಂಬವಾಗುತ್ತಿರುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೮೧೪ (೧೦೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಉಪ ನೋಂದಣಾಧಿಕಾರಿ ಕಛೇರಿಗಳಿವೆ ;

(ಆ) ಆಸ್ತಿ ನೋಂದಣಿಗಾಗಿ ಆನ್‌ಲೈನ್ ವ್ಯವಸ್ಥೆ ಜಾರಿಗೊಳಿಸಿದ್ದು, ಸರ್ವರ್ ಸಮಸ್ಯೆಯಿಂದ ಆಸ್ತಿ ನೋಂದಣಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಸರ್ಕಾರಕ್ಕೆ ರಾಜಸ್ವ ತಂದು ಕೊಡುವ ಈ ಇಲಾಖೆಯನ್ನು ತಾಂತ್ರಿಕವಾಗಿ ಸಬಲಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಹೆಚ್ಚು ಒತ್ತಡ ಇರುವ ಉಪನೋಂದಣಿ ಕಛೇರಿಗಳಲ್ಲಿ ಹೆಚ್ಚುವರಿ ಕಛೇರಿಗಳನ್ನು ತೆರೆದು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಮದ್ದೂರಿನ–ಶಿವಪುರದಿಂದ ಕೊಪ್ಪ ರಸ್ತೆ ಕಾಮಗಾರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೮೧೫ (೧೦೪೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮದ್ದೂರು ಮೂಲಕ ಶಿವಪುರದಿಂದ ಕೊಪ್ಪಗೆ ಹೋಗುವ ಮುಖ್ಯ ರಸ್ತೆ ಗುಂಡಿ ಬಿದ್ದು ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅನೇಕ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ಈ ರಸ್ತೆ ಅನೇಕ ವರ್ಷಗಳಿಂದ ಹಾಳಾಗಿದ್ದು, ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಇ) ಬಂದಿದ್ದಲ್ಲಿ, ಈ ರಸ್ತೆ ಅಭಿವೃದ್ಧಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಈ ರಸ್ತೆ ಕಾಮಗಾರಿಗೆ ಅನುಮೋದನೆ ದೊರಕಿದೆಯೇ ; ಇಲ್ಲವಾದಲ್ಲಿ, ಯಾವಾಗ ಅನುಮೋದನೆ ದೊರೆಯುವುದು ? (ವಿವರ ನೀಡುವುದು)

## ರಾಜ್ಯದಲ್ಲಿನ ಜಾನುವಾರುಗಳ ಗಣತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೮೧೬ (೧೦೪೨) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾನುವಾರು ಗಣತಿಯನ್ನು ಯಾವಾಗ ಮಾಡಲಾಗಿದೆ ; (ವಿವರ ನೀಡುವುದು)

(ಆ) ಹೊಸ ಜಾನುವಾರುಗಳ ಸಂಖ್ಯೆಗೆ ಅನುಗುಣವಾಗಿ ಹೆಚ್ಚುವರಿಯಾಗಿ ಬೇಕಾಗಿರುವ ಆಸ್ಪತ್ರೆಗಳನ್ನು ಮಂಜೂರು ಮಾಡಲಾಗಿದೆಯೇ ;

(ಇ) ಈ ಆಸ್ಪತ್ರೆಗಳಲ್ಲಿ ವೈದ್ಯರ ನೇಮಕಾತಿ ಮಾಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಈ) ಯಾವಾಗ ನೇಮಕಾತಿ ಮಾಡಲಾಗುವುದು ?

## ಬೆಂಗಳೂರುನಿಂದ ಮೈಸೂರು ರಸ್ತೆ ಅಭಿವೃದ್ಧಿ ಕಾಮಗಾರಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೮೧೭ (೧೦೪೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು–ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಎಷ್ಟು ಪಥಗಳ ರಸ್ತೆ ಅಭಿವೃದ್ಧಿ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಆ) ಸದರಿ ಕಾಮಗಾರಿ ಯಾವಾಗ ಆರಂಭಗೊಂಡಿದೆ ; ಯಾವಾಗ ಮುಕ್ತಾಯವಾಗುತ್ತದೆ ; (ವಿವರ ನೀಡುವುದು)

(ಇ) ಈ ರಸ್ತೆಯಲ್ಲಿ ಟೋಲ್ ಶುಲ್ಕ ವಸೂಲಿ ಮಾಡಲಾಗುತ್ತಿದೆಯೇ ; ಎಲೆಲ್ಲಿ ಟೋಲ್ ಅಳವಡಿಸಲಾಗುವುದು ?

## ವಸತಿ ಯೋಜನೆಯ ಅನುದಾನ ಬಿಡುಗಡೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೮೧೮ (೧೦೪೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿವಿಧ ವಸತಿ ಯೋಜನೆಗಳಲ್ಲಿ ಮಂಜೂರಾದ ಫಲಾನುಭವಿಗಳೆಷ್ಟು ; (ವಿಧಾನಸಭಾವಾರು ವಿವರ ನೀಡುವುದು)

(ಆ) ಇದರಲ್ಲಿ ಕಾಮಗಾರಿ ಪೂರ್ಣಗೊಂಡು ಜಿ.ಪಿ.ಎಸ್. ಅಳವಡಿಸಿರುವ ಮನೆಗಳೆಷ್ಟು ; ಅಪೂರ್ಣಗೊಂಡ ಮನೆಗಳೆಷ್ಟು ; (ವಿವರ ನೀಡುವುದು)

(ಇ) ಕಾಮಗಾರಿ ಪೂರ್ಣಗೊಂಡ ಫಲಾನುಭವಿಗಳಿಗೆ ಎಲ್ಲಾ ಹಂತದ ಅನುದಾನ ಬಿಡುಗಡೆಯಾಗಿದೆಯೇ ;

(ಈ) ಇಲ್ಲವಾದಲ್ಲಿ, ಯಾವಾಗ ಬಿಡುಗಡೆ ಮಾಡಲಾಗುವುದು ?

## ಮಡಿಕೇರಿಯಲ್ಲಿ ಕಟ್ಟುತ್ತಿರುವ ಮಿನಿ ವಿಧಾನಸೌಧದ ಕಾಮಗಾರಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೧೯ (೯೦೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆ ಮಡಿಕೇರಿಯಲ್ಲಿ ಕಟ್ಟುತ್ತಿರುವ ಮಿನಿ ವಿಧಾನಸೌಧದ ಕಾಮಗಾರಿ ನಿಂತು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಈ ಕಾಮಗಾರಿಯನ್ನು ಮುಂದುವರೆಸಲು ಇರುವ ತೊಡಕುಗಳೇನು ; (ಪೂರ್ಣ ವಿವರ ನೀಡುವುದು)

(ಆ) ಈ ಕಾಮಗಾರಿಗಳಿಗೆ ಬಿಡುಗಡೆಯಾಗಿರುವ ಒಟ್ಟು ಅನುದಾನ ಎಷ್ಟು ; ಖರ್ಚಾಗಿರುವ ಹಣ ಎಷ್ಟು ; (ವಿವರಗಳ ಮಾಹಿತಿ ನೀಡುವುದು)

(ಇ) ಈ ಕಾಮಗಾರಿಯನ್ನು ಯಾವಾಗ ಮುಗಿಸಲಾಗುವುದು ? (ವಿವರಗಳನ್ನು ನೀಡುವುದು)

## ರಾಜ್ಯದಲ್ಲಿನ ಮುಜರಾಯಿ ದೇವಾಲಯಗಳಿಗೆ ತಸ್ತಿಕ್ ಹಣ ಹೆಚ್ಚಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೦ (೯೦೬) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ, ಚಿಕ್ಕಮಂಗಳೂರು, ಕೊಡಗು, ಉತ್ತರ ಕನ್ನಡ ಜಿಲ್ಲೆಗಳಲ್ಲಿರುವ ಮುಜರಾಯಿ ದೇವಾಲಯಗಳ ಸಂಖ್ಯೆ ಎಷ್ಟು; (ಎ.ಬಿ.ಸಿ. ವರ್ಗೀಕರಣ ಮಾಡಿ ತಾಲ್ಲೂಕುವಾರು ವಿವರಗಳನ್ನು ನೀಡುವುದು)

(ಆ) ಈ ದೇವಾಲಯಗಳಲ್ಲಿರುವ ಅರ್ಚಕರ ಸಂಖ್ಯೆ ಎಷ್ಟು ; ಹಾಗೂ ಈ ಅರ್ಚಕರಿಗೆ ಸರ್ಕಾರದಿಂದ ನೀಡುವ ಸಂಭಾವನೆ, ಸೌಲಭ್ಯಗಳೇನು ; (ಆದೇಶದ ಪ್ರತಿಯನ್ನು ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ತಸ್ತಿಕ್ ಹಣ ಪಡೆಯುತ್ತಿರುವ ದೇವಾಲಯಗಳ ಹೆಸರು, ಪಡೆಯುತ್ತಿರುವ ಮೊಬಲಗು (ವರ್ಷಕ್ಕೆ) ತಾಲ್ಲೂಕುವಾರು ವಿವರಗಳನ್ನು ನೀಡುವುದು ;

(ಈ) ಪ್ರಸಕ್ತ ಕರ್ನಾಟಕದಲ್ಲಿ ಮುಜರಾಯಿ ಇಲಾಖೆ ಅನುಸರಿಸುತ್ತಿರುವ ಕಾಯ್ದೆ ಯಾವುದು ; ಏಕರೂಪವಾಗಿ ರಾಜ್ಯಕ್ಕೆ ಒಂದೆ ಕಾಯ್ದೆ ಇದೆಯೇ ಅಥವಾ ಬೇರೆ ಬೇರೆ ಕಾಯ್ದೆ ಇದ್ದಲ್ಲಿ ವಿವರ ನೀಡುವುದು ?

## ವಸತಿ ಇಲಾಖೆಯ ಮನೆಗಳನ್ನು ಸಾಮಾನ್ಯ ವರ್ಗದವರಿಗೆ ಹೆಚ್ಚಿನ ಸಂಖ್ಯೆಯಲ್ಲಿ ನೀಡುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೧ (೯೦೪) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ೨೦೧೮ ರಿಂದ ಇಲ್ಲಿಯವರೆಗೂ ಗ್ರಾಮ ಪಂಚಾಯತಿ ವ್ಯಾಪ್ತಿಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಸಾಮಾನ್ಯ ವರ್ಗದವರಿಗೆ ಮನೆಗಳ ನಿರ್ಮಾಣಕ್ಕೆ ಇಟ್ಟಿದ್ದ ಗುರಿ ಎಷ್ಟು ;

ಬಿಡುಗಡೆ ಮಾಡಲಾದ ಅನುದಾನ ಎಷ್ಟು ಮತ್ತು ನಿಗದಿಪಡಿಸಲಾದ ಗುರಿಯಲ್ಲಿ ಎಷ್ಟು ಮನೆಗಳು ಪೂರ್ಣವಾಗಿದೆ ; ಅಪೂರ್ಣ ಕಾಮಗಾರಿಗಳೆಷ್ಟು ; (ಕೊಡಗು ಜಿಲ್ಲೆಯ ಮಾಹಿತಿಯನ್ನು ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ಸಾಮಾನ್ಯ ವರ್ಗದವರಿಗೆ (ಬಡತನ ರೇಖೆಗಿಂತ ಕೆಳಗಿರುವವರಿಗೆ) ಮನೆಗಳ ನಿರ್ಮಾಣಕ್ಕೆ ಗ್ರಾಮ ಪಂಚಾಯತಿಗಳಲ್ಲಿ ಗುರುತಿಸಲಾದ ಫಲಾನುಭವಿಗಳೆಷ್ಟು ; (ವಿವರ ನೀಡುವುದು)

(ಇ) ಕೆಲವು ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರು ಕಡಿಮೆ ಇದ್ದು, ಸಾಮಾನ್ಯ ವರ್ಗದವರು ಹೆಚ್ಚಾಗಿರುವ ಕಡೆ ಮನೆಗಳ ನಿರ್ಮಾಣಕ್ಕೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಉಪಯೋಗವಿಲ್ಲದಿರುವ ಸಂದರ್ಭದಲ್ಲಿ ಬಿಡುಗಡೆಯಾದ ಅನುದಾನವನ್ನು ಸಾಮಾನ್ಯ ವರ್ಗದವರಿಗೆ ನಿಯಮದಲ್ಲಿ ಅವಕಾಶ ಇದೆಯೇ ; ಇಲ್ಲವಾದಲ್ಲಿ ಅವಕಾಶ ಮಾಡಿಕೊಡಲು ಸರ್ಕಾರದ ಚಿಂತನೆಗಳೇನು ?

## ಕೊಡಗು ಜಿಲ್ಲೆಯ ಹಳೆಯ ಸೇತುವೆಗಳ ದುರಸ್ಥಿ ಕಾಮಗಾರಿ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨೨ (೯೦೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತುಂಬಾ ಪುರಾತನವಾದ ಶಿಥಿಲಾವಸ್ಥೆಯಲ್ಲಿರುವ ಸೇತುವೆಗಳನ್ನು ಗುರುತಿಸಲಾಗಿದೆಯೇ ; ಅವುಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು ;

(ಆ) ಕೊಡಗು ಜಿಲ್ಲೆಯಲ್ಲಿರುವ ತುಂಬಾ ಪುರಾತನವಾದ ಶಿಥಿಲಾವಸ್ಥೆಯಲ್ಲಿರುವ ಸೇತುವೆಗಳು ಯಾವುವು ;

(ಇ) ಕೊಡಗು ಜಿಲ್ಲೆಯ ಸೋಮವಾರಪೇಟೆ ತಾಲ್ಲೂಕಿನ ಐಗೂರು ಮತ್ತು ಹೆಬ್ಬಾಲೆಯಲ್ಲಿರುವ ಸೇತುವೆಗಳು ಅಪಾಯಕಾರಿ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇವುಗಳ ದುರಸ್ಥಿಗೆ ಬೇಕಾದ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರ ಉದ್ದೇಶಿಸಲಾಗಿದೆಯೇ ?

## ರಾಜ್ಯದಲ್ಲಿ ಮಾಜಿ ಸೈನಿಕರಿಗೆ ಸೂಕ್ತ ಸವಲತ್ತು ನೀಡದಿರುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೨೩ (೯೦೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ನಿವೃತ್ತಿ ಹೊಂದಿರುವ ಯೋಧರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಮಾಜಿ ಸೈನಿಕರ ವಿವರಗಳು ಇಲ್ಲದಿದ್ದಲ್ಲಿ ಮಾಜಿ ಯೋಧರ ಪಟ್ಟಿ ಸಿದ್ದಪಡಿಸುವಲ್ಲಿ ಸರ್ಕಾರದ ಕ್ರಮಗಳೇನು ;

(ಇ) ನಿವೃತ್ತಿ ಹೊಂದಿದ ಯೋಧರಿಗೆ ರಾಜ್ಯ ಸರ್ಕಾರವು ನೀಡುವ ಸೌಲಭ್ಯಗಳೇನು ? (ಕಳೆದ ೫ ವರ್ಷಗಳಲ್ಲಿ ಈ ಸೌಲಭ್ಯಗಳನ್ನು ಪಡೆದ ಮಾಜಿ ಸೈನಿಕರ ಜಿಲ್ಲಾವಾರು ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆಯ ಅನುದಾನದ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೪ (೧೦೧೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ಲೋಕೋಪಯೋಗಿ ಇಲಾಖೆಯಿಂದ ವಿವಿಧ ಲೆಕ್ಕಶೀರ್ಷಿಕೆಯಡಿ ಬಿಡುಗಡೆಯಾದ ಅನುದಾನ ಎಷ್ಟು; (ವಿವರ ನೀಡುವುದು)

(ಆ) ಸದರಿ ಲೆಕ್ಕಶೀರ್ಷಿಕೆಯಡಿ ಕೈಗೊಂಡ ಕಾಮಗಾರಿಗಳು ಯಾವುವು ; (ಕಾಮಗಾರಿಯ ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಗಳಲ್ಲಿ ಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳೆಷ್ಟು ? (ವಿವರ ನೀಡುವುದು)

## ಕಲಬುರಗಿ ಜಿಲ್ಲೆಯಲ್ಲಿರುವ ಹಾಸ್ಟೆಲ್‌ಗಳ ಕುರಿತು

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೨೫ ೧೦೧೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಮತ್ತು ಸ್ವಂತ ಕಟ್ಟಡ ಕಲ್ಪಿಸಲು ಸರಕಾರ ಬಿಡುಗಡೆ ಮಾಡಿರುವ ಹಣ ಎಷ್ಟು;

(ಆ) ಕಳೆದ ಮೂರು ವರ್ಷಗಳಲ್ಲಿ ಹಾಸ್ಟೆಲ್‌ಗಳಿಗೆ ಆಹಾರ ಪದಾರ್ಥ ಮತ್ತು ಇತರೆ ಸಾಮ್ರಾಗಿಗಳನ್ನು ಖರೀದಿಸಲು ಬಿಡುಗಡೆಯಾದ ಅನುದಾನ ಎಷ್ಟು; ಈ ಪೈಕಿ ಖರ್ಚಾದ ಅನುದಾನ ಎಷ್ಟು;

(ಇ) ಆಹಾರ ಪದಾರ್ಥ ಮತ್ತು ಸಾಮಾಗ್ರಿಗಳನ್ನು ಸರಬರಾಜು ಮಾಡಿರುವ ಟೆಂಡರ್‌ದಾರರು ಯಾರು ? (ವಿವರ ನೀಡುವುದು)

## ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ಮೂಲಭೂತ ಸೌಕರ್ಯಗಳು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೮೨೬ (೧೦೦೭) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ಯೋಜನೆ ಅನ್ವಯ ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) ಮತ್ತು (ಗ್ರಾಮಾಂತರ)ಗಳ ಅನುಷ್ಠಾನಕ್ಕೆ ನೀಡಿರುವ ಮಾಗದರ್ಶಿ ಸೂತ್ರಗಳು ಯಾವುವು ;

(ಆ) ಈ ಯೋಜನೆ ಅಡಿಯಲ್ಲಿ ಕಳೆದ ೫ ವರ್ಷಗಳಲ್ಲಿ ರಾಜ್ಯಕ್ಕೆ ನೀಡಲಾದ ಗುರಿಯೆಷ್ಟು ಮತ್ತು ಈ ಕಾರ್ಯಕ್ರಮದಲ್ಲಿ ಇದುವರೆಗಿನ ಸಾಧನೆಗಳೆಷ್ಟು; (ಜಿಲ್ಲಾವಾರು, ಭೌತಿಕ–ಆರ್ಥಿಕ ಗುರಿ ಮತ್ತು ಸಾಧನೆ ಒಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಯೋಜನೆ ಅಡಿಯಲ್ಲಿ ನಿಗದಿಪಡಿಸಿರುವ ಎಲ್ಲಾ ಮೂಲಭೂತ ಸೌಕರ್ಯಗಳನ್ನು ನಗರ ಮತ್ತು ಗ್ರಾಮಾಂತರ ಪ್ರದೇಶದಲ್ಲಿ ಬಡವರಿಗಾಗಿ ನಿರ್ಮಿಸಿರುವ ವಸತಿ ಗೃಹಗಳಲ್ಲಿ ಒದಗಿಸಲಾಗಿದೆಯೇ ? (ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು)

## ಅಪಘಾತದಿಂದ ಮೃತಪಟ್ಟ ಕುಟುಂಬದವರಿಗೆ ಆರ್ಥಿಕ ನೆರವು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೮೨೭ (೧೦೧೦) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿಗಳಲ್ಲಿ ದಿನನಿತ್ಯ ಅಪಘಾತ ಮತ್ತು ಅಪಘಾತದಿಂದ ಸಾವುಗಳು ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ರಸ್ತೆ ಅಪಘಾತದಿಂದ ಮರಣ ಹೊಂದಿದವರ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಸ್ತೆ ಅಪಘಾತಕ್ಕೆ ಒಳಗಾದ ಸಂತ್ರಸ್ತರಿಗೆ ಮತ್ತು ಮೃತಪಟ್ಟ ಕುಟುಂಬದವರಿಗೆ ರಾಜ್ಯ ಸರ್ಕಾರದಲ್ಲಿ ಆರ್ಥಿಕ ನೆರವು ನೀಡುವ ಯೋಜನೆ ಇದೆಯೇ ;

(ಈ) ಇಲ್ಲದಿದ್ದಲ್ಲಿ, ರಸ್ತೆ ಅಪಘಾತಕ್ಕೆ ಒಳಗಾದ ಸಂತ್ರಸ್ತರಿಗೆ ಆರ್ಥಿಕ ನೆರವು ನೀಡಲು ಸರ್ಕಾರ ಕಾನೂನು ರೂಪಿಸಲು ಉದ್ದೇಶಿಸಿದೆಯೇ ; (ವಿವರ ನೀಡುವುದು)

(ಉ) ಕೆಲವೊಂದು ರಾಜ್ಯ ಮತ್ತು ರಾಷ್ಟ್ರೀಯ ಹೆದ್ದಾರಿ ಮತ್ತು ಮೋಟಾರ್ ದಾರಿ (Express Way) ಗಳಲ್ಲಿ ಅತೀ ಹೆಚ್ಚು ಅಪಘಾತಗಳು ಸಂಭವಿಸುತ್ತಿವೆ, ಈ ಬಗ್ಗೆ ಸರ್ಕಾರ ಅಧ್ಯಯನ/ಸಮೀಕ್ಷೆ ನಡೆಸಿದೆಯೇ; ಹಾಗಿದ್ದಲ್ಲಿ, ವಿವರ ನೀಡುವುದು ;

(ಊ) ರಾಜ್ಯ, ರಾಷ್ಟ್ರೀಯ ಹೆದ್ದಾರಿ ಮತ್ತು ಮೋಟಾರ್ ದಾರಿಗಳಲ್ಲಿ ಪ್ರಯಾಣಿಕರ ಸುರಕ್ಷತೆ ಮತ್ತು ತುರ್ತು ವೈದ್ಯಕೀಯ ಸೇವೆ ಒದಗಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಜಾನುವಾರುಗಳ ಗಣತಿಯ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೮೨೮ (೧೦೦೬) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ೨೦ ನೇ ಜಾನುವಾರು ಗಣತಿಯನ್ನು ಕೇಂದ್ರ ಸರ್ಕಾರದ ಮಾರ್ಗದರ್ಶನದನ್ವಯ ನಡೆಸಲಾಗಿದೆಯೇ; ಹಾಗಿದ್ದಲ್ಲಿ, ವಿವಿಧ ರೀತಿಯ ಜಾನುವಾರು ಸಂಖ್ಯೆಯ ಮಾಹಿತಿಯನ್ನು ಜಿಲ್ಲಾವಾರು ವಿವರ ನೀಡುವುದು ;

(ಆ) ಈ ಜಾನುವಾರು ಗಣತಿಯ ಪ್ರಕಾರ, ರಾಜ್ಯದಲ್ಲಿ ಹಾಲು ನೀಡುವ ವಿವಿಧ ರೀತಿಯ ಹಸು ಮತ್ತು ಎಮ್ಮೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಜಾನುವಾರು ಗಣತಿಯನ್ವಯ ರಾಜ್ಯದಲ್ಲಿ ಹಾಲು ನೀಡುವ, ಬರಡಾದ ಹಸು ಮತ್ತು ಎಮ್ಮೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ವರ್ಗಾವಾರು ವಿವರ ನೀಡುವುದು)

(ಈ) ರಾಷ್ಟ್ರೀಯ ಹೈನುಗಾರಿಕೆ-I (National Dairy Plan-I)ಯ ಅಡಿಯಲ್ಲಿ "ಕ್ಷೀರ ಅಭಿಯಾನ" (Milk Mission) ಅಡಿಯಲ್ಲಿ ರಾಜ್ಯ ಸರ್ಕಾರ ಕಡಿಮೆ ಪ್ರಮಾಣದಲ್ಲಿ ಹಾಲು ನೀಡುವ ಹಸು ಮತ್ತು ಎಮ್ಮೆಗಳಲ್ಲಿ ಹೆಚ್ಚಿನ ಇಳುವರಿ ಭರಿಸಲು ಹಾಗೂ ಬರಡು

ಹಸು ಎಮ್ಮೆಗಳನ್ನು ಗರ್ಭಧಾರಣೆ ಮಾಡಿ ಉತ್ತಮ ರೋಗರಹಿತ ಹಾಲು ಉತ್ಪಾದನೆ ಮಾಡಲು ಕೈಗೊಂಡ ಕ್ರಮಗಳೇನು ; ಈ ಕಾರ್ಯಕ್ರಮಗಳಿಗೆ ರಾಷ್ಟ್ರೀಯ ಹೈನುಗಾರಿಕೆ ಅಭಿವೃದ್ಧಿ ಮಂಡಲಿ (NDDB) ಯಿಂದ ಪಡೆದುಕೊಂಡ ಅನುದಾನವೆಷ್ಟು? ಮತ್ತು ಈ ಅನುದಾನವನ್ನು ಯಾವ್ಯಾವ ಶೀರ್ಷಿಕೆ ಅಡಿಯಲ್ಲಿ ಉಪಯೋಗಿಸಿಕೊಳ್ಳಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ರಾಷ್ಟ್ರೀಯ ಹೈನುಗಾರಿಕೆ ಯೋಜನೆ–II (NDP-II) ಅನ್ನು ರಾಷ್ಟ್ರೀಯ ಹೈನುಗಾರಿಕೆ ಅಭಿವೃದ್ಧಿ ಮಂಡಲಿ (NDDB) ಜಾರಿಗೆ ತಂದಿದ್ದು, ಈ ಯೋಜನೆಯ ವಿವರಗಳೇನು ಮತ್ತು ರಾಜ್ಯ ಸರ್ಕಾರ ಪಡೆದ ಅನುದಾನ ಮತ್ತು ಸಾಧನೆಗಳ ವಿವರದ ಮಾಹಿತಿ ಒದಗಿಸುವುದು ?

## ದೀನ ದಲಿತರಿಗೆ, ಹಿಂದುಳಿದವರಿಗೆ, ನಿಮ್ನ ವರ್ಗದವರಿಗೆ ಆರ್ಥಿಕ ನೆರವು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೮೨೯ (೧೦೦೮) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಯೋಜನೆಗಳ ಅಡಿಯಲ್ಲಿ ಸಮಾಜದ ದೀನ–ದಲಿತರಿಗೆ, ಹಿಂದುಳಿದವರಿಗೆ, ನಿಮ್ನ ವರ್ಗದವರಿಗೆ ಮತ್ತು ಈ ವರ್ಗಗಳ ಸ್ವಸಹಾಯ ಗುಂಪುಗಳಿಗೆ ಆರ್ಥಿಕ ನೆರವು ನೀಡುವ ಯೋಜನೆಗಳನ್ನು ರಾಜ್ಯ ಸರ್ಕಾರ ರೂಪಿಸಿದೆಯೇ ; ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

(ಆ) ಕಳೆದ ೩ ವರ್ಷಗಳಲ್ಲಿ ಮೇಲೆ ಪ್ರಸ್ತಾಪಿಸಲಾದ ಸಮುದಾಯಗಳಿಗೆ ಆದ್ಯತೆ ಸಾಲ ನೀಡುವ ಯೋಜನೆ ಅಡಿಯಲ್ಲಿ ಒದಗಿಸಿರುವ ಆರ್ಥಿಕ ನೆರವು ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಬೇಲೆಕೇರಿ ಬಂದರಿನಲ್ಲಿರುವ ಕಬ್ಬಿಣದ ಅದಿರಿನ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೮೩೦ (೧೦೦೯) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೇಲೆಕೇರಿ ಬಂದರಿನಲ್ಲಿ ಪ್ರಸ್ತುತದಲ್ಲಿ ನಡೆಯುತ್ತಿರುವ ಬಂದರಿಗೆ ಸಂಬಂಧಿಸಿದ ಚಟುವಟಿಕೆಗಳು ಯಾವುವು ;

(ಆ) ಬೇಲೆಕೇರಿ ಬಂದರಿನಲ್ಲಿ ಲಭ್ಯವಿರುವ ಖಾಲಿ ಜಮೀನು ಯಾವ ಯಾವ ಖಾಸಗಿ ಕಂಪನಿಗಳಿಗೆ ಯಾವ ಯಾವ ಉದ್ದೇಶಕ್ಕೆ ಮಂಜೂರು ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರಸ್ತುತ ಬೇಲೆಕೇರಿ ಬಂದರಿನಲ್ಲಿ ವಿವಿಧ ಖಾಸಗಿ ಕಂಪನಿಗಳು ಶೇಖರಿಸಿದ್ದ ಕಬ್ಬಿಣದ ಅದಿರು ರಾಶಿಗಳನ್ನು ಅರಣ್ಯ ಇಲಾಖೆಯವರು ವಶಪಡಿಸಿಕೊಂಡಿದ್ದು, ಈ ರಾಶಿಗಳನ್ನು ಕೋರ್ಟ್ ಆದೇಶದ ಅನ್ವಯ ವಿಲೇವಾರಿ ಮಾಡಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಈ) ಈ ರೀತಿ ಗುತ್ತಿಗೆ ನಿಬಂಧನೆ ಉಲ್ಲಂಘಿಸಿದ ಕಂಪನಿಗಳ ಗುತ್ತಿಗೆ ಕರಾರನ್ನು ರದ್ದುಪಡಿಸಲಾಗಿದೆಯೇ ? (ಹಾಗಿದ್ದಲ್ಲಿ, ಸಂಪೂರ್ಣ ವಿವರ ನೀಡುವುದು)

## ಲೋಕೋಪಯೋಗಿ ಇಲಾಖೆ ಗುತ್ತಿಗೆಯಲ್ಲಿ ಮೀಸಲಾತಿ ಕುರಿತು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೧ (೮೮೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಲೋಕೋಪಯೋಗಿ ಇಲಾಖೆಯ ಗುತ್ತಿಗೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ನಿಗದಿಪಡಿಸಲಾಗಿರುವ ಮೀಸಲಾತಿ ಪ್ರಮಾಣ ಎಷ್ಟು ;

(ಆ) ರಾಜ್ಯದ ಪ್ರತಿ ಜಿಲ್ಲೆಗಳಲ್ಲಿ ಎಷ್ಟು ಕಾಮಗಾರಿಗಳನ್ನು ಇವರಿಗೆ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಪ್ಯಾಕೇಜ್ ಸಿಸ್ಟಂನಲ್ಲಿ ಇವರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ಮುಧೋಳ ತಾಲ್ಲೂಕಿನಲ್ಲಿ ವಸತಿ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೨ (೮೮೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನಲ್ಲಿ ವಸತಿ ಇಲಾಖೆಯಿಂದ ಕೈಗೊಂಡಿರುವ ಯೋಜನೆಗಳಾವುವು ;

(ಆ) ಯಾವ ಯಾವ ವರ್ಗದ ಜನರಿಗೆ ಎಷ್ಟು ಮನೆಗಳು ಮಂಜೂರಾಗಿವೆ, ಎಷ್ಟು ಮನೆಗಳನ್ನು ಹಂಚಿಕೆ ಮಾಡಲಾಗಿದೆ ;

(ಇ) ಕಳೆದ ಎರಡು ವರ್ಷಗಳಲ್ಲಿ ಸಾಧಿಸಿರುವ ಗುರಿಯೆಷ್ಟು ?

## ಆದಿವಾಸಿ ಕುಟುಂಬಗಳು ಸರ್ಕಾರದ ಸವಲತ್ತುಗಳಿಂದ ವಚಿಂತರಾಗುತ್ತಿರುವ ಬಗ್ಗೆ

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೩ (೮೮೯) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿರುವ ಆದಿವಾಸಿ ಜನಾಂಗದ ಅನೇಕ ಕುಟುಂಬಗಳು ಆಧಾರ್ ಕಾರ್ಡ್, ಪಡಿತರ ಚೀಟಿ, ಮತದಾರರ ಗುರಿತಿನ ಚೀಟಿ ಹಾಗೂ ಇತರೆ ಅವಶ್ಯಕ ದಾಖಲಾತಿಗಳನ್ನು ಹೊಂದದೆ ಇರುವುದರಿಂದ ಸರ್ಕಾರದ ಬಹುತೇಕ ಸವಲತ್ತುಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕುಟುಂಬಗಳಿಗೆ ಈ ಅತ್ಯಾವಶ್ಯ ದಾಖಲಾತಿಗಳನ್ನು ಒದಗಿಸಲು ಸಮಾಜ ಕಲ್ಯಾಣ ಇಲಾಖೆ ಕೈಗೊಂಡಿರುವ ಕ್ರಮಗಳೇನು ;

(ಇ) ಹಲವಾರು ಆದಿವಾಸಿ ಜನಾಂಗದ ಕುಟುಂಬಗಳಿಗೆ ಈ ದಾಖಲಾತಿಗಳ ಮಹತ್ವ ತಿಳಿಯದಿರುವುದರಿಂದ ಹಾಗೂ ಪಡೆಯುವ ವಿಧಾನ ಗೊತ್ತಿಲ್ಲದಿರುವುದರಿಂದ ಅವರಿಗೆ ಸಹಾಯ ಮಾಡಲು ಇಲಾಖೆಯ ಯಾವ ಕ್ರಮ ವಹಿಸಲಿದೆ ?

## ಕೊಡಗು ಜಿಲ್ಲೆಯಲ್ಲಿ ಕಂದಾಯ ನಿಗಧಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೪ (೮೯೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಕಂದಾಯ ನಿಗಧಿಗಾಗಿ ಎಷ್ಟು ಅರ್ಜಿ ಸಲ್ಲಿಕೆಯಾಗಿವೆ ; ಸದರಿ ಅರ್ಜಿಗಳಲ್ಲಿ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳು ಎಷ್ಟು ;

(ಆ) ಬಾಕಿ ಇರುವ ಅರ್ಜಿಗಳ ಶೀಘ್ರ ವಿಲೇವಾರಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಸದರಿ ಅರ್ಜಿಗಳಲ್ಲಿ ಎಷ್ಟು ಅರ್ಜಿಗಳನ್ನು ಸಕಾಲದಲ್ಲಿ ನೋಂದಾಯಿಸಿ ವಿಲೇವಾರಿ ಮಾಡಲಾಗಿದೆ ;

(ಈ) ಸಕಾಲ ಯೋಜನೆಯಲ್ಲಿ ಸದರಿ ಅರ್ಜಿಗಳ ವಿಲೇವಾರಿಗೆ ತಡವಾಗುತ್ತಿರಲು ಕಾರಣಗಳೇನು ?

## ಕೊಡಗು ಜಿಲ್ಲೆಯಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆ ಭರ್ತಿ ಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩೫ (೮೮೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಭೂಮಾಪನಾ ಇಲಾಖೆಗೆ ಮಂಜೂರಾಗಿರುವ ಭೂಮಾಪಕರ ಹುದ್ದೆಗಳು ಎಷ್ಟು ;

(ಆ) ಪ್ರಸ್ತುತ ಜಿಲ್ಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಭೂಮಾಪಕರ ಸಂಖ್ಯೆ ಎಷ್ಟು ;

(ಇ) ಜಿಲ್ಲೆಯಲ್ಲಿ ಪ್ರಸ್ತುತ ಎಷ್ಟು ಭೂಮಾಪಕರ ಹುದ್ದೆ ಖಾಲಿ ಇವೆ ;

(ಈ) ಖಾಲಿ ಇರುವ ಭೂಮಾಪಕರ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ಕೊಡಗು ಜಿಲ್ಲೆಯಲ್ಲಿ ಮಳೆಹಾನಿ ಕಾಮಗಾರಿಗಳಿಗೆ ಹಣ ಪಾವತಿ ಮಾಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೮೩೬ (೮೮೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಕೊಡಗು ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಯಡಿ ಮಳೆಹಾನಿ ಕಾಮಗಾರಿಗಳನ್ನು ನಿರ್ವಹಿಸಿ, ಪೂರ್ಣಗೊಳಿಸಿರುವ ಗುತ್ತಿಗೆದಾರರಿಗೆ ಸಂಪೂರ್ಣ ಹಣ ಪಾವತಿಯಾಗಿದೆಯೇ ;

(ಆ) ಪಾವತಿಯಾಗದಿದ್ದಲ್ಲಿ, ಗುತ್ತಿಗೆದಾರರಿಗೆ ಸಂದಾಯವಾಗಬೇಕಿರುವ ಬಾಕಿ ಹಣದ ಮೊತ್ತವೆಷ್ಟು ಮತ್ತು ಇದುವರೆಗೂ ಬಾಕಿ ಹಣ ಸಂದಾಯವಾಗದೆ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಗುತ್ತಿಗೆದಾರರಿಗೆ ಬಾಕಿ ಹಣ ಸಂದಾಯ ಮಾಡಲಾಗುವುದು ?

## ಬೀದರ್ ಜಿಲ್ಲೆಯ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಅನುದಾನ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೩೭ (೯೯೫) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೨೦೧೯ ಮತ್ತು ೨೦೧೯-೨೦೨೦ ನೇ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆ ಅಡಿಯಲ್ಲಿ ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಸದರಿ ಜಿಲ್ಲೆಯಲ್ಲಿ ಎಸ್.ಸಿ.ಪಿ. ಮತ್ತು ಟಿ.ಎಸ್.ಪಿ. ಯೋಜನೆ ಅಡಿ ಕಾಮಗಾರಿಗಳಿಗೆ ಅನುಮೋದನೆ ನೀಡಿದ್ದರೂ ಹಣ ಬಿಡುಗಡೆ ಮಾಡದಿರಲು ಕಾರಣಗಳೇನು ; ಎಷ್ಟು ಕಾಮಗಾರಿಗಳಿಗೆ ಹಣ ಬಿಡುಗಡೆ ಆಗಿರುವುದಿಲ್ಲ ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯ ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೩೮ (೯೯೬) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಈ ವಿದ್ಯಾರ್ಥಿ ನಿಲಯಗಳಲ್ಲಿ ಕುಡಿಯುವ ನೀರು, ಶೌಚಾಲಯ ಹಾಗೂ ಮೂಲಭೂತ ಸೌಲಭ್ಯಗಳಿಲ್ಲದೆ, ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ತಾಲ್ಲೂಕುವಾರು ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಅತಿವೃಷ್ಠಿಯಿಂದ ಹಾನಿಗೊಳಗಾದ ರೈತರ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೩೯ (೯೯೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಅತಿವೃಷ್ಠಿಯಿಂದ ಹಾನಿಗೊಳಗಾದ ರೈತರಿಗೆ ಪರಿಹಾರ ನೀಡಲಾಗಿದೆಯೇ ; ಹಾಗಿದ್ದಲ್ಲಿ, ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಅತಿವೃಷ್ಠಿಯಿಂದ ಹಾನಿಗೊಳಗಾದ ರೈತರಿಗೆ ಇದುವರೆಗೆ ಪರಿಹಾರ ನೀಡಲು ಬಿಡುಗಡೆಯಾಗಿರುವ ಹಣ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನ ಅತಿವೃಷ್ಠಿಯಿಂದ ಹಾನಿಗೊಳಗಾದ ರೈತರ ಸಂಖ್ಯೆ ಎಷ್ಟು ; ಎಷ್ಟು ರೈತರಿಗೆ ಪರಿಹಾರ ನೀಡಲಾಗಿದೆ ; ಇನ್ನೂ ಎಷ್ಟು ರೈತರಿಗೆ ಪರಿಹಾರ ನೀಡಬೇಕಾಗಿದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಮುಜರಾಯಿ ದೇವಸ್ಥಾನಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೪೦ (೯೯) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಮುಜರಾಯಿ ಇಲಾಖೆಯಿಂದ ನಡೆಯುತ್ತಿರುವ ದೇವಾಲಯಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ೨೦೧೯–೨೦೨೦ ನೇ ಸಾಲಿನಲ್ಲಿ ಮುಜರಾಯಿ ಇಲಾಖೆಯಿಂದ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು, ದೇವಾಲಯವಾರು ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಗೋಮಾಳ ವಿಸ್ತೀರ್ಣದ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೪೧ (೮೮೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ಗೋಮಾಳ ಪ್ರದೇಶಗಳ ವಿಸ್ತೀರ್ಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಗೋಮಾಳ ಜಮೀನುಗಳನ್ನು ರಕ್ಷಿಸಲು ಹಾಗೂ ಅಕ್ರಮ ಒತ್ತುವರಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಒತ್ತುವರಿದಾರರನ್ನು ಗುರುತಿಸಿ ಅವುಗಳ ತೆರವಿಗಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಂದಾಯ ಭೂಮಿ ಹಂಚಿಕೆ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೮೪೨ (೮೮೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಕಂದಾಯ ಇಲಾಖೆಯ ವತಿಯಿಂದ ಯಾವ ಯಾವ ಯೋಜನೆಗಳಿಗಾಗಿ ಭೂಮಿ ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ಭೂಮಿ ಹಂಚಿಕೆ ಮಾಡಲು ಸರ್ಕಾರ ಅನುಸರಿಸುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ಈ ಯೋಜನೆಗಳ ಜವಾಬ್ದಾರಿಯನ್ನು ನಿರ್ವಹಿಸುವ ಅಧಿಕಾರಿಯ ಕಾರ್ಯ ವ್ಯಾಪ್ತಿಗಳೇನು ? (ವಿವರ ನೀಡುವುದು)

## ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸರ್ವೆಯರ್‌ಗಳ ಕೊರತೆ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ):-**

೮೪೩ (೧೦೨೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯ ತಾಲ್ಲೂಕುಗಳಿಗೆ ಮಂಜೂರಾಗಿರುವ ಭೂಮಾಪಕರ ಹುದ್ದೆಗಳ ಸಂಖ್ಯೆ ಎಷ್ಟು ; ಭರ್ತಿಯಾಗಿರುವ ಹುದ್ದೆಗಳು ಎಷ್ಟು ; ಹಾಗೂ ಖಾಲಿ ಇರುವ ಹುದ್ದೆ ಎಷ್ಟು ;

(ಆ) ತಾಲ್ಲೂಕುಗಳಲ್ಲಿ ಭೂಮಾಪಕರ ಕೊರತೆ ಉಂಟಾಗಿದ್ದು, ಜಮೀನಿನ ಅಳತೆ, ಮನೆಗಳ ಇ-ಖಾತೆ ನೀಡುವಲ್ಲಿ ಬಹಳ ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೂಡಲೇ ಸರ್ವೆಯರ್‌ಗಳ ಹುದ್ದೆಗಳನ್ನು ಖಾಯಂ ಅಥವಾ ತಾತ್ಕಾಲಿಕವಾಗಿ ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಇ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಎಷ್ಟು ಮಂದಿ ಪರವಾನಗಿ ಪಡೆದ ಭೂಮಾಪಕರು ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ ; ಖಾಯಂಗೊಳಿಸುವಂತೆ ಅವರು ಸರ್ಕಾರಕ್ಕೆ ಮನವಿ ಸಲ್ಲಿಸಿರುವುದು ನಿಜವೇ ; ಅನೇಕ ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಪರವಾನಗಿ ಪಡೆದ ಭೂ ಮಾಪಕರನ್ನು ಖಾಯಂ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ?

## ಚಾಮರಾಜನಗರ ಜಿಲ್ಲೆ ಬೆಂಡರವಾಡಿ ಕೆರೆ ಏರಿಯ ಮೇಲಿನ ರಸ್ತೆ ದುರಸ್ಥಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-**

೬೪೪ (೯೧೧) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮೈಸೂರು ಚಾಮರಾಜನಗರ ಹೆದ್ದಾರಿಯಲ್ಲಿ ಬರುವ ಬೆಂಡರವಾಡಿ ಕೆರೆ ಏರಿಯ ಉದ್ದ ಎಷ್ಟು ; ಕೆರೆ ಏರಿಯ ಮೇಲಿನ ಈ ರಸ್ತೆಯು ಗುಂಡಿಬಿದ್ದು ಹಾಳಾಗಿ ಸಂಚಾರಕ್ಕೆ ಅಡಚಣೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ರಸ್ತೆಯನ್ನು ದುರಸ್ಥಿಗೊಳಿಸಲು ಕ್ರಮ ಜರುಗಿಸಲಾಗುವುದೇ ;

(ಆ) ಕೆರೆ ಏರಿ ಕಿರಿದಾಗಿದ್ದು ಅಪಾಯಕಾರಿ ಸ್ಥಿತಿಯಲ್ಲಿರುವುದರಿಂದ ಸದರಿ ಹೆದ್ದಾರಿಗೆ ಅನುಗುಣವಾಗಿ ಏರಿಯನ್ನು ಅಗಲೀಕರಣ ಮಾಡಲು ಅಥವಾ ಏರಿಯ ಹಿಂದೆ ಈಗಿರುವ ಕಚ್ಚಾ ರಸ್ತೆಯನ್ನು ಅಗಲೀಕರಣ ಮಾಡಿ ಅಭಿವೃದ್ಧಿಪಡಿಸಿ, ಕೆರೆ ಏರಿಯ ಮೇಲೆ ಮತ್ತು ಏರಿಯ ಹಿಂದೆ ಏಕಮುಖ ಸಂಚಾರ ವ್ಯವಸ್ಥೆ ತರಲು ಯೋಜನೆಯನ್ನು ಸಿದ್ಧಪಡಿಸಿ ಜಾರಿಗೆ ತರಲು ಕ್ರಮ ಜರುಗಿಸಲಾಗುವುದೇ ?

## ಚಾಮರಾಜನಗರದಲ್ಲಿ ಟೌನ್ ಶಿಪ್ ನಿರ್ಮಾಣದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೮೪೫ (೯೧೦) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಚಾಮರಾಜನಗರದ ಕಿರಗಸೂರು, ಭೋಗಾಪುರ ಗ್ರಾಮದ ಬಳಿ ಸಾರ್ವಜನಿಕ ವಸತಿ ಸೌಲಭ್ಯಕ್ಕಾಗಿ ಟೌನ್‌ಶಿಪ್ ನಿರ್ಮಿಸಲು ಉದ್ದೇಶಿಸಲಾಗಿದೆಯೇ ; ಇದಕ್ಕಾಗಿ ಭೂಸ್ವಾಧೀನ ಕಾರ್ಯ ಕೈಗೊಳ್ಳಲಾಗಿದೆಯೇ ;

(ಆ) ಯೋಜನೆಯ ರೂಪುರೇಷೆಗಳೇನು ? (ವಿವರ ನೀಡುವುದು)

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O162/500 ಪ್ರತಿಗಳು/04–03–2021